ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 143 RNI Number : KNKAN/25/A2770 01-06-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :143 ರಾಯಚೂರು 01-06-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸಮರ್ಥ ನಾಯಕನ ಆಯ್ಕೆ : ಮಲ್ಲಿಕಾರ್ಜುನ ಖರ್ಗೆ

ಕಲಬುರಗಿ, ಮೇ 31-

ಮುಂದಿನ ಎರಡು ವರ್ಷಗಳಲ್ಲಿ ವಿಧಾನಸಭಾ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕೆಪಿಸಿಸಿ ಅಧ್ಯಕ್ಷರನ್ನು ಆಯ್ಕೆಮಾಡುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ಬಳಿಕ ಕೆಪಿಸಿಸಿ ಸ್ಥಾನವನ್ನು ಬಿಟ್ಟುಕೊಡುವುದು ಸಹಜ. ಬೇರೆಯವರನ್ನು ಅಧ್ಯಕ್ಷರನ್ನಾಗಿ ಮಾಡಲೇ ಬೇಕಿದೆ ಎಂದರು.

ಪಕ್ಷದ ಅಧ್ಯಕ್ಷ ಸ್ಥಾನಕ್ಕೆ ಹುಡುಕಾಟ ನಡೆಯುತ್ತಿದೆ. ನೂತನ ಅಧ್ಯಕ್ಷರು ಒಳ್ಳೆಯವರಾಗಿರಬೇಕು. ಪಕ್ಷದ ಅಧ್ಯಕ್ಷರು ಮತ್ತು ಮುಖ್ಯಮಂತ್ರಿ ನಡುವೆ ಹೊಂದಾಣಿಕೆ ಇರಬೇಕು. ಪಕ್ಷದ ಹಿತದೃಷ್ಟಿ ಹಾಗೂ ಪಕ್ಷ ಸಂಘಟನೆ ಗಮನದಲ್ಲಿಟ್ಟುಕೊಂಡು ಆಯ್ಕೆ ಮಾಡುತ್ತೇವೆ. ಇನ್ನೂ 24 ತಿಂಗಳಲ್ಲಿ ವಿಧಾನಸಭಾ ಚುನಾವಣೆ ಎದುರಾಗಲಿದೆ. ಮುಂದಿನ ದಿನಗಳಲ್ಲಿ ವೇಗವಾಗಿ ಕೆಲಸ ಮಾಡುವ, ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮಗ್ರವಾಗಿ ಪಕ್ಷ ಕಟ್ಟುವ ನಾಯಕರನ್ನು ಹುಡುಕಬೇಕಾಗಿದೆ. ಮುಖ್ಯಮಂತ್ರಿಯವರ ಜೊತೆ ಸಹಕರಿಸಬೇಕು. ಈ ಎಲ್ಲಾ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು ಪಕ್ಷದ ಅಧ್ಯಕ್ಷರನ್ನು ನೇಮಿಸಲಾಗುತ್ತಿದೆ ಎಂದಿದ್ದಾರೆ.

ಸಿದ್ದರಾಮಯ್ಯ ಬಣದ ಪ್ರಯತ್ನ:

ಈವರೆಗೂ ಪಕ್ಷದ ಆಧಿಪತ್ಯ ಡಿ.ಕೆ.ಶಿವಕುಮಾರ್ ಅವರ ಬಳಿಯಿತ್ತು. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದರು. ಇಬ್ಬರೂ ಹಳೇ ಮೈಸೂರು ಭಾಗದವರಾಗಿದ್ದರು. ಉತ್ತರ ಕರ್ನಾಟಕ ಭಾಗಕ್ಕೆ ಅನ್ಯಾಯವಾಗಿದೆ ಎಂಬ ಅಸಮಾಧಾನ ಇತ್ತು.ಕೆಪಿಸಿಸಿ ಅಧ್ಯಕ್ಷರಾಗಿದ್ದವರು ಸಹಜವಾಗಿಯೇ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಯಾಗಿರುತ್ತಾರೆ. ಕಳೆದ ವಿಧಾನಸಭಾ ಚುನಾವಣೆಯಿಂದ ಈವರೆಗೂ ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ.ಕೆ.ಶಿವಕುಮಾರ್ ಪಟ್ಟು ಹಿಡಿದು ಕೊನೆಗೂ ಮುಖ್ಯಮಂತ್ರಿ ಸ್ಥಾನ ಧಕ್ಕಿಸಿಕೊಂಡಿದ್ದಾರೆ.

ಮುಂದೆ ಕೆಪಿಸಿಸಿ ಅಧ್ಯಕ್ಷರಾಗಿ ಕೆಲಸ ಮಾಡುವವರು ಕೂಡ ಇದೇ ರೀತಿ ಮುಖ್ಯಮಂತ್ರಿ ಹುದ್ದೆಗೆ ಪೈಪೋಟಿ ನಡೆಸುವ ಸಾಧ್ಯತೆ ಇದೆ. ಪ್ರಸ್ತುತ ಎರಡು ವರ್ಷಗಳ ಕಾಲ ಸಚಿವರಾಗಿದ್ದಕ್ಕಿಂತಲೂ ಪಕ್ಷದ ಅಧ್ಯಕ್ಷ ಸ್ಥಾನ ಪ್ರಭಾವಿ ಎಂದು ಭಾವಿಸಲಾಗಿದೆ.

ಆದರೆ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಿರುವುದರಿಂದ ಮುಂದಿನ ಚುನಾವಣೆಯಲ್ಲಿ ಒಂದು ವೇಳೆ ಕಾಂಗ್ರೆಸ್ ಮರಳಿ ಅಧಿಕಾರ ಹಿಡಿದರೂ ಡಿ.ಕೆ.ಶಿವಕುಮಾರ್ ಮುಂದುವರೆಯುವ ಸಾಧ್ಯತೆ ಇದೆ. ಹೀಗಾಗಿ ಕೆಲವರು ಪಕ್ಷದ ಅಧ್ಯಕ್ಷರಾಗಲು ಹಿಂದೇಟು ಹಾಕುತ್ತಿದ್ದಾರೆ ಎನ್ನಲಾಗಿದೆ. ಸದ್ಯದ ಮಟ್ಟಿಗೆ ಸತೀಶ್ ಜಾರಕಿಹೊಳಿ ಸಚಿವ ಸ್ಥಾನ ಮತ್ತು ಕೆಪಿಸಿಸಿ ಅಧ್ಯಕ್ಷ ಸ್ಥಾನ ಎರಡರ ಮೇಲೂ ಕಣ್ಣಿಟ್ಟಿದ್ದಾರೆ. ತಾವು ಹೈಕಮಾಂಡ್ ಬಳಿ ಪಕ್ಷದ ಅಧ್ಯಕ್ಷ ಸ್ಥಾನ ಕೇಳಿರುವುದು ನಿಜ ಎಂದು ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ. ಆದರೆ ಪಕ್ಷ ಯಾವುದೇ ನಿರ್ಧಾರ ಕೈಗೊಂಡರೂ ಅದಕ್ಕೆ ಬದ್ಧ ಎಂದು ಪುನರುಚ್ಚರಿಸಿದ್ದಾರೆ.

ಈ ಮೊದಲು 2010ರ ಅಕ್ಟೋಬರ್ 27 ರಿಂದ 2018ರ ಜುಲೈ 4ರ ವರೆಗೂ ಕೆಪಿಸಿಸಿ ಅಧ್ಯಕ್ಷರಾಗಿ ಕೆಲಸ ಮಾಡಿದ್ದ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿ ಹುದ್ದೆಗೆ ಆಸೆ ಪಟ್ಟಿದ್ದರು. ಆದರೆ ಅದು ಸಾಧ್ಯವಾಗಿಲ್ಲ. 2019ರಲ್ಲಿ ಕಾಂಗ್ರೆಸ್-ಜೆಡಿಎಸ್ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿದ್ದರು. 2023ರಲ್ಲಿ ಕಾಂಗ್ರೆಸ್ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಲು ಸಾಕಷ್ಟು ಪ್ರಯತ್ನ ಮಾಡಿದ್ದರೂ ಅದು ಈಡೇರಲಿಲ್ಲ.

ಸಿದ್ದರಾಮಯ್ಯ ಅವರ ಸಂಪುಟದಲ್ಲಿ ತಾವೊಬ್ಬರೇ ಉಪ ಮುಖ್ಯಮಂತ್ರಿಯಾಗಿರಬೇಕೆಂದು ಡಿ.ಕೆ.ಶಿವಕುಮಾರ್ ಪಟ್ಟು ಹಿಡಿದಿದ್ದರಿಂದಾಗಿ ಇತರ ಆಕಾಂಕ್ಷಿಗಳಿಗೆ ಅವಕಾಶ ಸಿಗಲಿಲ್ಲ.

ಡಿ.ಕೆ.ಶಿವಕುಮಾರ್ ಸಂಪುಟದಲ್ಲಿ ಪರಮೇಶ್ವರ್ ಉಪ ಮುಖ್ಯಮಂತ್ರಿಯಾಗಲು ಬಯಸಿದ್ದರೂ ನಾಲ್ಕು ಜನರನ್ನು ಉಪ ಮುಖ್ಯಮಂತ್ರಿ ಮಾಡುವ ಸಾಧ್ಯತೆ ಇರುವುದರಿಂದಾಗಿ ಆ ಹುದ್ದೆಗೆ ಪ್ರಾಮುಖ್ಯ ಇಲ್ಲ ಎಂದು ಹೇಳಲಾಗುತ್ತಿದೆ. ಈ ಕಾರಣಕ್ಕಾಗಿ ಪರಮೇಶ್ವರ್ ಹಿಂದೇಟು ಹಾಕುತ್ತಿದ್ದಾರೆ.

ಯಾದವ್ ಸಮಾಜದ ರಾಜ್ಯ ಅಧ್ಯಕ್ಷ ಎಂಎಲ್ಸಿ ಶ್ರೀನಿವಾಸ ಸಚಿವ ಸ್ಥಾನ ನೀಡಿ



ಸಿಂಧನೂರು,ಮೇ.31-

ಕರ್ನಾಟಕ ರಾಜ್ಯ ನೂತನ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ನೇತೃತ್ವದಲ್ಲಿ ನಡೆಯುವ ಸಂಪುಟ ಪುನರ್ ರಚನೆಯಲ್ಲಿ ಕರ್ನಾಟಕ ರಾಜ್ಯ ಯಾದವ್ ಸಮುದಾಯದ ರಾಜ್ಯ ಅಧ್ಯಕ್ಷ ಡಿ.ಟಿ. ಶ್ರೀನಿವಾಸ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಯಾದವ್ ಸಮಾಜದ ತಾಲೂಕು ಅಧ್ಯಕ್ಷ ಚ್ಯಾಗಿ ನರಸಪ್ಪ ಯಾದವ್ ಆಗ್ರಹ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು 1995-96 ರಲ್ಲಿ ನಮ್ಮ ಯಾದವ್ ಸಮಾಜದಿಂದ ಮುನಿಯಪ್ಪ ಮುದ್ದಪ್ಪ ಸಚಿವರಾಗಿದ್ದರು ಅಲ್ಲಿಂದ ಇಲ್ಲಿಯವರೆಗೆ ಯಾದವ್ ಸಮಾಜದ ಯಾವ ವ್ಯಕ್ತಿಗಳು ಯಾವುದೇ ಉನ್ನತ ಸ್ಥಾನ ಪಡೆದಿರುವುದಿಲ್ಲ ಈಗಾಗಲೇ ವಿಧಾನ ಪರಿಷತ್ ಸದಸ್ಯರಾಗಿ ಜನರಿಗೋಸ್ಕರ ಸೇವೆ ಸಲ್ಲಿಸುತ್ತಿರುವ ಡಿ. ಟಿ. ಶ್ರೀನಿವಾಸ ಅವರನ್ನು ಈ ಬಾರಿ ಪುನರ್ ಸಚಿವ ಸಂಪುಟ ರಚನೆಯಲ್ಲಿ ಸಚಿವ ಸ್ಥಾನ ನೀಡಲು ಸಮುದಾಯದಿಂದ ಅಗ್ರಿಸುತ್ತೇವೆ ಎಂದು ಹೇಳಿದರು

ಸಮಾಜದಲ್ಲಿ ವಿಕಾಸ ಕಾಣದ ಅರ್ಥಿಕ.ಸಾಮಾಜಿಕ. ಶೈಕ್ಷಣಿಕವಾಗಿ ನಮ್ಮ ಸಮುದಾಯ ಹಿಂದುಳಿದಿದೆ ಮತ್ತು ರಾಜ್ಯದಲ್ಲಿ 35 ಲಕ್ಷ ಜನಸಂಖ್ಯೆ ಹೊಂದಿರುವ ಸಮಾಜ ಯಾದವ್ ಅರ್ಥಿಕವಾಗಿ ಹಿಂದುಳಿದ ವರ್ಗಗಳ ಪ್ರಗತಿ ಹೊಂದಲು ಸಮುದಾಯಕ್ಕೆ ಸಚಿವ ಸ್ಥಾನ ನೀಡಲು ಆಗ್ರಹ ಕಾಂಗ್ರೆಸ್ ಪಕ್ಷಕ್ಕೆ ರಾಜ್ಯಾದ್ಯಂತ ಬೆಂಬಲ ನೀಡುತ್ತೇವೆ ಎಂದು ನಿವೃತ್ತಿ ಯೋಧ ವೀರೇಶ್ ಯಾದವ್ ಮಾತನಾಡಿದರು. ನಮ್ಮ

3 ನೇ ಪುಟಕ್ಕೆ

ದೇಶದಲ್ಲಿ ಸಂಸ್ಕೃತಿ. ಸಂಸ್ಕಾರ. ಪರಂಪರೆ.ಆಧುನಿಕತೆ. ಉಳಿವಿಗಾಗಿ ಪಾದಯಾತ್ರೆ ಉದ್ದೇಶ

ಧಾರ್ಮಿಕ ಸಭೆಯಲ್ಲಿ ವಿಶೇಷ ಆಶೀರ್ವಚನ ರ.ಜೈನ ಧರ್ಮದ ಆಚಾರ್ಯ ವಿಮಲ್ ಸಾಗರ್ ಸುರೇಶ್ವರಜೀ ಅಭಿಮತ





ಸಿಂಧನೂರು,ಮೇ.31-

ದೇಶದಲ್ಲಿ ಸಂಸ್ಕೃತಿ. ಸಂಸ್ಕಾರ. ಪರಂಪರೆ .ನೀತಿ.ಶಿಕ್ಷಣ ಮನುಕುಲದ ಒಳಿತಿಗಾಗಿ ಸದ್ಭಾವನೆ ಧರ್ಮ ಇವುಗಳೆಲ್ಲವೂ ದೇಶದಲ್ಲಿ ಉಳಿವಿಗಾಗಿ ಜಾಗ್ರತೆಯಾಗಿ ಅರಿವು ಮೂಡಿಸುವ ಸಲುವಾಗಿ ಪಾದಯಾತ್ರೆ ಎಂದು ಹಮ್ಮಿಕೊಳ್ಳಲಾಗಿದೆ ಎಂದು ಜೈನ್ ಧರ್ಮದ ಆಚಾರ್ಯರಾದ ಮಿಲನ್ ಸಾಗರ್ ಸುರೇಶ್ವರಜೀ ಹೇಳಿದರು

ನಗರದ ಜೈನ್ ಕಲ್ಯಾಣ ಮಂಟಪದಲ್ಲಿ ನಡೆದ ಧಾರ್ಮಿಕ ಸಭೆ ಮತ್ತು ಪ್ರವಚನ ಕಾರ್ಯಕ್ರಮ ನಿರೂಪಿಸಿದರು ಆದನಂತರ ಸುದ್ದಿಗಾರ ಜೊತೆಗೆ ಮಾತನಾಡಿದರು

ಕರ್ನಾಟಕ ರಾಜ್ಯದ ದಕ್ಷಿಣ ಭಾಗದ ಹಿರಿಯೂರು ತಾಲ್ಲೂಕಿನ 1982

3 ನೇ ಪುಟಕ್ಕೆ

ಎಸ್.ಟಿ. 7% ಮೀಸಲಾತಿ ತಡೆಯಾಜ್ಞೆ ತೆರವುಗೊಳಿಸಲು ರಾಜ್ಯ ಸರ್ಕಾರ ಕ್ರಮವಹಿಸಲಿ: ಶ್ರೀರಾಮುಲು ಆಗ್ರಹ



ರಾಯಚೂರು, ಮೇ 31

ಪರಿಶಿಷ್ಟ ಪಂಗಡ (ಎಸ್.ಟಿ.) ಸಮುದಾಯಕ್ಕೆ 7 ಶೇಕಡಾ ಮೀಸಲಾತಿ ಜಾರಿಗೆ ಇರುವ ತಡೆಯಾಜ್ಞೆಯನ್ನು ರಾಜ್ಯ ಸರ್ಕಾರ ತಕ್ಷಣ ತೆರವುಗೊಳಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮಾಜಿ ಸಚಿವ . ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂವಿಧಾನ ಜನಸಂಖ್ಯೆಗನುಗುಣವಾಗಿ ಮೀಸಲಾತಿ ನಿಗದಿಪಡಿಸಬೇಕೆಂದು ಹೇಳುತ್ತದೆ. ಆ ನಿಟ್ಟಿನಲ್ಲಿ ಬೊಮ್ಮಾಯಿ ಸರಕಾರ ಎಸ್.ಸಿ ಗೆ 15 % ದಿಂದ 17 ಹಾಗೂ ಎಸ್.ಟಿ ಸಮುದಾಯಕ್ಕೆ ಶೇ.3% ರಿಂದ 7 % ಕ್ಕೆ ಮೀಸಲಾತಿ ಹೆಚ್ಚಳ ಮಾಡಿ ಕೇಂದ್ರ ಸರಕಾರಕ್ಕೆ ಅನುಮೋದನೆ ನೀಡುವಂತೆ ಕಳುಹಿಸಿಕೊಡಲಾಗಿದೆ.

ಆದರೆ ರಾಯಚೂರಿನ ಪ್ರಿಯಾಂಕ್ ಖರ್ಗೆ ಅವರ ಬೆಂಬಲಿಗರೊಬ್ಬರು 56% ಪ್ರತಿಶತ ಮೀಸಲಾತಿ ನೀಡುವುದನ್ನು ಆಕ್ಷೇಪಿಸಿ ಇದು ಸಂವಿಧಾನ ಬಾಹಿರ ಎಂದು ನ್ಯಾಯಾಲಯದ ಮೊರೆ ಹೋಗಿ ಹೆಚ್ಚುವರಿ ಮೀಸಲಾತಿಗೆ ತಡೆಯಾಜ್ಞೆ ತಂದಿದಾರೆ ಎಂದು

3 ನೇ ಪುಟಕ್ಕೆ

18 ನೇ ರೈಲ್ವೆ ಜೋನ್ ಅಸ್ತಿತ್ವಕ್ಕೆ: ಡಾ.ಬಾಬುರಾವ್

ರಾಯಚೂರು: ರೈಲ್ವೆ ಇಲಾಖೆಯ 18 ನೇ ರೈಲ್ವೆ ಜೋನ್ ಅಸ್ತಿತ್ವಕ್ಕೆ ಬಂದಿದೆ ಎಂದು ರೈಲ್ವೆ ಸಲಹಾ ಸಮಿತಿಯ ಮಾಜಿ ಸದಸ್ಯ ಡಾ. ತಿಳಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ದಕ್ಷಿಣ ಮಧ್ಯ ರೈಲ್ವೆ ಜೋನ್ ನಲ್ಲಿದ್ದ ವಿಜಯವಾಡ, ಗುಂಟೂರು, ಗುಂತಕಲ್,ವಿಶಾಖಪಟ್ಟಣಂ ವಿಭಾಗಗಳನ್ನು ಒಳಗೊಂಡಂತೆ ಹೊಸದಾಗಿ ಸೌತ್ ಕೋಸ್ಟ್ ರೈಲ್ವೆ ಜೋನ್ ಅಸ್ತಿತ್ವಕ್ಕೆ ಬಂದಿದ್ದು ಜೂನ್ ಒಂದರಂದು ಪ್ರಾರಂಭವಾಗಲಿದೆ ಎಂದು ಅವರು ತಿಳಿಸಿದ್ದಾರೆ.



ರಾಯಚೂರು ಹಾಗೂ ಯಾದಗಿರಿಗಳು ಮೊದಲಿನಂತೆ ದಕ್ಷಿಣ ಮಧ್ಯ ರೈಲ್ವೆ ಜೋನ್ ನಲ್ಲಿ ಮುಂದುವರೆಯಲಿವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತುಂಗಭದ್ರಾ ನದಿಗೆ ಈಜಲು ಹೋಗಿ ಯುವತಿ ಸೇರಿ ಐವರು ನೀರುಪಾಲು

ಸಿಂಧನೂರು ಸಂಜೆ

ರಾಯಚೂರು: ನದಿಗೆ ಈಜಲು ಹೋಗಿ ಒಂದು ಮಗು, ಮೂವರು ಯುವಕರು ಹಾಗೂ ಓರ್ವ ಯುವತಿ ಸೇರಿ ಐವರು ನೀರುಪಾಲಾಗಿರುವ ಘಟನೆ ರಾಯಚೂರು ಗಡಿಯ ಮಂತ್ರಾಲಯದ ತುಂಗಭದ್ರಾ ನದಿಯಲ್ಲಿ ಸಂಭವಿಸಿದೆ.

ಚಂದ್ರ (05), ಸತೀಶ್ (35), ರಾಘವೇಂದ್ರ (25), ಧನುಷ್ (23), ಉರವಕೊಂಡದ ಸಂಧ್ಯಾ (22) ನೀರುಪಾಲಾದವರು ಎಂದು ಗುರುತಿಸಲಾಗಿದೆ.

ಮಂತ್ರಾಲಯದಲ್ಲಿ ಸಂಬಂಧಿಕರ ಮನೆಯಲ್ಲಿ ಏರ್ಪಡಿಸಿದ್ದ ಸತ್ಯನಾರಾಯಣ ಪೂಜೆಗೆ ಆಗಮಿಸಿದ್ದು, ಪೂಜೆ ಮುಗಿದ ನಂತರ ನದಿಯಲ್ಲಿ ಈಜಲು ತೆರಳಿದ್ದರು. ನದಿ ನೀರಿನ ಆಳ ತಿಳಿಯದೆ ನೀರಿನಲ್ಲಿ ಕೊಚ್ಚಿಕೊಂಡು ಹೋಗಿದ್ದಾರೆ ಎಂದು ಮೂಲಗಳಿಂದ ತಿಳಿದು ಬಂದಿದೆ.

ಯುವತಿ ಅರ್ಪಣಾ ಎಂಬವರು ಪಾರಾಗಿದ್ದು, ಧನುಷ್ ಮೃತದೇಹ ಪತ್ತೆಯಾಗಿದೆ.

ಪೊಲೀಸರು ಸ್ಥಳೀಯ ಮೀನುಗಾರರೊಂದಿಗೆ ಉಳಿದವರಿಗೆ ಶೋಧ ಕಾರ್ಯ ನಡೆಸುತ್ತಿದ್ದಾರೆ.

ಡಿವೈಎಸ್ಪಿ ಭಾರ್ಗವಿ ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದರು.

ಎಸ್ಎಸ್ಎಲ್ಸಿ ನಂತರ ಕಡಿಮೆ ಖರ್ಚಿನಲ್ಲಿ ಡಿಪ್ಲೊಮಾ : ಕಲಿಕೆಯ ಜೊತೆಗೆ ಉದ್ಯೋಗದ ಗ್ಯಾರಂಟಿ

ಲಿಂಗಸುಗೂರು : ಎಸ್ಎಸ್ಎಲ್ಸಿ ಮತ್ತು ಸಿಬಿಎಸ್ಇ 10ನೇ ತರಗತಿ ಫಲಿತಾಂಶ ಪ್ರಕಟಗೊಂಡ ಬೆನ್ನಲ್ಲೇ ವಿದ್ಯಾರ್ಥಿಗಳ ಮುಂದಿರುವ ಪ್ರಮುಖ ಪ್ರಶ್ನೆ ಮುಂದೇನು? ತಾಂತ್ರಿಕ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವವರಿಗೆ ಡಿಪ್ಲೊಮಾ ಕೋರ್ಸ್ಗಳು ಉತ್ತಮ ಆಯ್ಕೆಯಾಗಿ ಮೂಡಿಬಂದಿವೆ.

ಎಸ್ಎಸ್ಎಲ್ಸಿ ಉತ್ತೀರ್ಣರಾದ ವಿದ್ಯಾರ್ಥಿಗಳು 3 ವರ್ಷದ ಡಿಪ್ಲೊಮಾ ಕೋರ್ಸ್ ಸೇರಬಹುದು. ಕೋರ್ಸ್ ಮುಗಿಸಿದ ತಕ್ಷಣ ಕಿರಿಯ ಇಂಜಿನಿಯರ್, ತಾಂತ್ರಿಕ ಮೇಲ್ವಿಚಾರಕ, ಡ್ರಾಫ್ಟ್ಮನ್, ಪ್ರೋಗ್ರಾಮರ್ ಹುದ್ದೆಗಳಲ್ಲಿ ಉದ್ಯೋಗ ಪಡೆಯುವ ಅವಕಾಶ ಇದೆ.

ಲ್ಯಾಟರಲ್ ಎಂಟ್ರಿ ಸೌಲಭ್ಯ:

ಡಿಪ್ಲೊಮಾ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ./. 2ನೇ ವರ್ಷಕ್ಕೆ ನೇರ ಪ್ರವೇಶದ ಸೌಲಭ್ಯವಿದೆ. ಇದರಿಂದ ಕೇವಲ 4 ವರ್ಷದಲ್ಲಿ ಇಂಜಿನಿಯರಿಂಗ್ ಪದವಿ ಮುಗಿಸಬಹುದು. ಜೊತೆಗೆ ಕೆಲಸ ಮಾಡುತ್ತಲೇ ಪರೀಕ್ಷೆ ಮೂಲಕ ./.ಗೆ ಸಮಾನ ಮಾನ್ಯತೆ ಪಡೆಯುವ ಅವಕಾಶವೂ ಇದೆ.

ರಾಯಚೂರು ಜಿಲ್ಲೆಯ ಆಯ್ಕೆಗಳು :

ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಲಿಂಗಸುಗೂರು, ಸರ್ಕಾರಿ ಪಾಲಿಟೆಕ್ನಿಕ್ ರಾಯಚೂರು ಮತ್ತು ಶ್ರೀ ಸಂಜೀವ ಪಾಲಿಟೆಕ್ನಿಕ್

3 ನೇ ಪುಟಕ್ಕೆ

ಬಸ್ ನಿಲ್ದಾಣದಲ್ಲಿ ಕಿರುಕುಳ: ಮಹಿಳೆಯಿಂದ ಯುವಕನಿಗೆ ಧರ್ಮದೇಟು



ಲಿಂಗಸುಗೂರು:ಪಟ್ಟಣದ ಬಸ್ ನಿಲ್ದಾಣದಲ್ಲಿ ಶನಿವಾರ ಬೆಳಿಗ್ಗೆ ಬಸ್ಗಾಗಿ ಕಾಯುತ್ತಿದ್ದ ಮಹಿಳೆಯ ಬಳಿ ತೆರಳಿ ಯುವಕನೊಬ್ಬ ಅಸಭ್ಯವಾಗಿ ವರ್ತಿಸಿದ ಘಟನೆ ನಡೆದಿದೆ.

ಯುವಕನ ಈ ಅಸಭ್ಯ ವರ್ತನೆಯಿಂದ ಆಕ್ರೋಶಗೊಂಡ ಮಹಿಳೆ ತಕ್ಷಣವೇ ತನ್ನ ಕಾಲಲ್ಲಿದ್ದ ಚಪ್ಪಲಿ ತೆಗೆದು ಆತನಿಗೆ ಮನಬಂದಂತೆ ಧಳಿಸಿದ್ದಾಳೆ. ಒಂಟಿಯಾಗಿರುವುದನ್ನು ನೋಡಿ ಕಿರುಕುಳ ನೀಡಲು ಬಂದಿದ್ದ ಯುವಕನಿಗೆ ಮಹಿಳೆಯ ತಕ್ಷಣದ ಪ್ರತಿರೋಧ ತಕ್ಕ ಪಾಠವಾಯಿತು ಇದನ್ನು ಗಮನಿಸಿದ ಸುತ್ತಮುತ್ತಲಿನ ಸಹ ಪ್ರಯಾಣಿಕರು ಹಾಗೂ ಸಾರ್ವಜನಿಕರು ತಕ್ಷಣವೇ ಮಹಿಳೆಯ ನೆರವಿಗೆ ಧಾವಿಸಿದರು. ಕಿರುಕುಳ ನೀಡಿದ ಯುವಕನಿಗೆ ಹಿಗ್ಗಾಮುಗ್ಗಾ ಧರ್ಮದೇಟು ನೀಡಿ ಎಚ್ಚರಿಸಿದರು.

ಜನರಿಂದ ತೀವ್ರ ಪೆಟ್ಟು ತಿಂದ ಯುವಕ ಅವಮಾನ ಹಾಗೂ ಮುಖಭಂಗದಿಂದ ಸ್ಥಳದಿಂದ ಕಾಲ್ಕಿತ್ತಿದ್ದಾನೆ. ಈ ಘಟನೆಯು ಲಿಂಗಸುಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಕಿಡಿಗೇಡಿಗೆ ಪಾಠ ಕಲಿಸಿದ ಮಹಿಳೆಯ ಧೈರ್ಯಕ್ಕೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಬಸ್ ಸ್ಟಾಂಡ್ನಂತಹ ಸಾರ್ವಜನಿಕ ಜಾಗದಲ್ಲಿ ಮಹಿಳೆಯರ ರಕ್ಷಣೆಗೆ ಜನರು ಎಚ್ಚರದಿಂದ ಇರಬೇಕು ಅನ್ನೋ ಸಂದೇಶವೂ ರವಾನೆಯಾಗಿದೆ.

ಕಾರಣ ಲಿಂಗಸುಗೂರು ಪೊಲೀಸರು ಯುವಕನ ಮೇಲೆ ಸ್ವಯಂ ಪ್ರೇರಣೆಯಿಂದ ಬಿಎನ್ಎಸ್ ಸೆಕ್ಷನ್ 74, 75 ಅಡಿ ಪ್ರಕರಣ ದಾಖಲಿಸಲು ಅವಕಾಶ ಇದೆ.ಪೊಲೀಸರು ಕೇಸು ದಾಖಲಿಸಿಕೊಂಡು ಇಂತ ನೀಚ ವ್ಯಕ್ತಿಗಳಿಗೆ ಬುದ್ದಿ ಕಲಿಸಬೇಕು ಎಂದು ಸಾರ್ವಜನಿಕರ ಅಭಿಪ್ರಾಯವಾಗಿದೆ.

ಡಿ.ಕೆ. ಶಿವಕುಮಾರ್ ಅವರ ಪರಿಚಯ

ಕನಕಪುರ ತಾಲ್ಲೂಕು, ದೊಡ್ಡಆಲಹಳ್ಳಿ ಗ್ರಾಮದ ಶ್ರೀ ಕೆಂಪೇಗೌಡ ಹಾಗೂ ಶ್ರೀಮತಿ ಗೌರಮ್ಮದಂಪತಿಯ ಪ್ರಥಮ ಪುತ್ರನಾಗಿ ಜನಿಸಿದ ಶ್ರೀ ಡಿ.ಕೆ. ಶಿವಕುಮಾರ್ (ಜನನ 15ನೇ ಮೇ 1962) ತಮ್ಮತಂದೆಯಿಂದಲೇ ನಾಯಕತ್ವದ ಗುಣಗಳನ್ನು ಪಡೆದುಕೊಂಡು ಬಂದರು. 18ನೇ ವಯಸ್ಸಿನಲ್ಲಿಯೇ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ವಿದ್ಯಾರ್ಥಿ ವಿಭಾಗವಾದ ಘೆಖಖಿಐಗೆ ಸೇರ್ಪಡೆಗೊಂಡು ಅನತಿ ಕಾಲದಲ್ಲಿಯೇ ಬೆಂಗಳೂರು ಜಿಲ್ಲೆಯ ಘಟಕದ ಅಧ್ಯಕ್ಷರಾದರು (1981-83). ತದನಂತರ ವಿದ್ಯಾಭ್ಯಾಸಕ್ಕೆಂದು ಬೆಂಗಳೂರು ಸೇರಿದ ಶ್ರೀ ಡಿ.ಕೆ. ಶಿವಕುಮಾರ್ ಆರ್.ಸಿ. ಕಾಲೇಜಿ ನಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಯುವ ಕಾಂಗ್ರೆಸ್ಗೆ ಸೇರಿ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಯುವಕಾಂಗ್ರೆಸ್ ಅಧ್ಯಕ್ಷರಾಗಿ ಕನಕಪುರ ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಉಚಿತ ವೈದ್ಯಕೀಯ ಶಿಬಿರ, ರಕ್ತದಾನ ಶಿಬಿರಗಳನ್ನು ವ್ಯವಸ್ಥೆಗೊಳಿಸಿ ಜನಮನವನ್ನು ಸೂರೆಗೊಂಡರು. 1985ರ ಸಾತನೂರು ವಿಧಾನಸಭಾಕ್ಷೇತ್ರದಲ್ಲಿ ಅಂದಿನ ಪ್ರಭಾವಿ ಜನತಾದಳ ಮುಖಂಡರಾದ ಶ್ರೀ ಹೆಚ್.ಡಿ. ದೇವೇಗೌಡಅವರ ವಿರುದ್ಧ ಕಾಂಗ್ರೆಸ್ ರಾಯಚೂರ ಸಂಜೆ ರಾಯಚೂರು, ಮೇ 31: ನೂತನ ವಾಗಿ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾದ ಡಿ.ಕೆ. ಶಿವಕುಮಾರ್ ಅವರಿಗೆ ಕರ್ನಾಟಕ ರಾಜ್ಯ ಬಲಗೈ ಜಾತಿಗಳು ಒಕ್ಕೂಟ ಜಿಲ್ಲಾ ಸಮಿತಿ ವತಿ ಯಿಂದ ಅಭಿನಂ ದನೆ ಸಲ್ಲಿಸಲಾಗಿದ್ದು, ರಾಜ್ಯ ಸಚಿವ ಸಂಪುಟದಲ್ಲಿ ಬಲಗೈ ಸಮುದಾಯದ ಹಿರಿಯ ನಾಯಕರಾದ ಡಾ. ಜಿ. ಪರಮೇಶ್ವರ್ ಅಥವಾ ಯುವ ನಾಯಕ ಪ್ರಿಯಾಂ ಕ್ ಖರ್ಗೆ ಅವರ ಲ್ಲಿ ಒಬ್ಬರನ್ನು ಉಪ ಮುಖ್ಯ ಮಂತ್ರಿಯಾಗಿ ನೇಮಕ ಮಾಡಬೇಕೆಂದು ಒಕ್ಕೂಟ ಡಿ.ಕೆ. ಶಿವಕುಮಾರ್ ಅವರ ಪರಿಚಯ ಜೂನ್3ರಂದು ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸುತ್ತಿರುವ ಪಕ್ಷದಲ್ಲಿ ಉತ್ತಮ ಅಭ್ಯರ್ಥಿ ಸಿಗುವುದು ದುರ್ಲಭವಾದಾಗ ಪಕ್ಷದ ವರಿಷ್ಠರ ಕಣ್ಣು ಶ್ರೀ ಡಿ.ಕೆ. ಶಿವಕುರ್ಮಾ ಮೇಲೆ ಬಿತ್ತು. ಹೀಗಾಗಿ ರಾಜಕಾರಣದ ಪರಿಚಯವೇ ಇಲ್ಲದಿದ್ದ ಶ್ರೀ ಡಿ.ಕೆ. ಶಿವಕುರ್ಮಾ ಅವರನ್ನು ಶ್ರೀ ಹೆಚ್.ಡಿ. ದೇವೇಗೌಡ ಅವರ ವಿರುದ್ಧ ಸ್ಪರ್ಧಿಸಲು ಪಕ್ಷದ ಅಭ್ಯರ್ಥಿಯನ್ನಾಗಿ ನಿಲ್ಲಿಸಲಾಯಿತು. ಸಾಕಷ್ಟು ಪ್ರಬಲ ಪ್ರತಿರೋಧವನ್ನೇ ತೋರಿದ ಶ್ರೀ ಡಿ.ಕೆ. ಶಿವಕುಮಾರ್ ಚುನಾವಣೆಯಲ್ಲಿ ಶ್ರೀ ಹೆಚ್.ಡಿ. ದೇವೇಗೌಡರು ಅತ್ಯಂತ ಪ್ರಯಾಸದ ಜಯ ಪಡೆಯುವಂತೆ ಮಾಡುವಲ್ಲಿ ಯಶಸ್ವಿಯಾದರು.

ವಿಧಾನಸಭಾ ಚುನಾವಣೆಯಾದ ಕೆಲವೇ ದಿನಗಳಲ್ಲಿ 1987ರಲ್ಲಿ ಅವರು ಸಾತನೂರು ಕ್ಷೇತ್ರದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿಗೆ ಸದಸ್ಯರಾಗಿ ಆಯ್ಕೆಗೊಂಡರು. 1989ರಲ್ಲಿ ಅಖಿಲ ಭಾರತೀಯಕಾಂಗ್ರೆಸ್ ಪಕ್ಷದ ಮುಖೇನ ಸಾತನೂರು ವಿಧಾನ ಸಭಾಕ್ಷೇತ್ರದಿಂದ ಸ್ಪರ್ಧಿಯನ್ನಾಗಿ ನಿಲ್ಲಿಸಲಾಯಿತು. ಅಭೂತಪೂರ್ವ ರೀತಿಯಲ್ಲಿ, ಕ್ಷೇತ್ರದಲ್ಲಿ ಬೇರೂರಿದ ಜನತಾದಳದ ಪ್ರಾಬಲ್ಯವನ್ನು ಮೊಟಕುಗೊಳಿಸಿದ ಶ್ರೀ ಡಿ.ಕೆ. ಶಿವಕುಮಾರ್ ಅತ್ಯಧಿಕ ಮತಗಳಿಂದ ಜಯಗಳಿಸಿದರು. 1991ರಲ್ಲಿ ಅಂದಿನ ಮುಖ್ಯಮಂತ್ರಿ ಶ್ರೀ ವೀರೇಂದ್ರ ಪಾಟೀಲ್ ಅವರು ಅನಾರೋಗ್ಯದ ಕಾರಣ ಮುಖ್ಯಮಂತ್ರಿ ಪದವಿಯನ್ನು ತ್ಯಜಿಸಬೇಕಾಗಿ ಬಂದಾಗ ಅವರ ಉತ್ತರಾಧಿ ಕಾರಿಯನ್ನಾಗಿ ಸೋರೆಕೊಪ್ಪ ಬಂಗಾರಪ್ಪ ಅವರು ಸರ್ವಾ ನುಮತದಿಂದ ಆಯ್ಕೆಯಾಗುವಂತೆ ಮಾಡುವಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಅತ್ಯಂತ ಪ್ರಮುಖ ಪಾತ್ರ ವಹಿಸಿದ್ದರು. ಇದಕ್ಕೆ ಬಹುಮಾನದ್ಯೋತಕವಾಗಿ ಶ್ರೀ ಬಂಗಾರಪ್ಪನವರು ಈ ಯುವಕನನ್ನು ರಾಜ್ಯಮಟ್ಟದ ಸಚಿವರನ್ನಾಗಿ ಮಾಡಿ ಬಂಧಿಖಾನೆ ಖಾತೆ ನೀಡಿದರು. ಆದರೂ ಕಾಂಗ್ರೆಸ್ ಪಕ್ಷದಲ್ಲಿದ್ದ ಹಲವು ವಿರೋಧಿಗಳ ರಾಜಕೀಯ ಪಿತೂರಿಯಿಂದಾಗಿ 1994ರಲ್ಲಿ ಪಕ್ಷದ ಟಿಕೆಟ್ ವಿರೋಧಿಸಲಾಯಿತು, ಧೃತಿಗೆಡದೆ ಶ್ರೀ ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಜಯಗಳಿಸಿ ಜಯದ ಪರಂಪರೆ ಮುಂದುವರೆಸಿದರು.


2004ರಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಸಾತನೂರು ವಿಧಾನಸಭಾ ಕ್ಷೇತ್ರದಿಂದ 4ನೇ ಭಾರಿ ಆರಿಸಿ ಬಂದರೂ ಕೂಡ ಕಾಂಗ್ರೆಸ್ ಪಕ್ಷ ಬಹುಮತಗಳಿಸುವಲ್ಲಿ ವಿಫಲವಾಯಿತು. ಸ್ವಂತ ಶಕ್ತಿಯ ಮೇಲೆ ಸರ್ಕಾರ ರಚಿಸಲು ಅಗತ್ಯವಾದ ಬಹುಮತವಿಲ್ಲದ ಕಾರಣ ಕೋಮುವಾದಿ ಬಿ.ಜೆ.ಪಿ. ಪಕ್ಷ ಅಧಿ ಕಾರಕ್ಕೇರದಂತೆ ತಡೆಯಲು ಶ್ರೀ ದೇವೇಗೌಡ ನೇತೃತ್ವದ ಪಕ್ಷವಾದ ಜೆ.ಡಿ.ಎಸ್.(ಜಾತ್ಯಾತೀತ) ಜೊತೆಗೆ ಹೊಂದಾಣಿಕೆ ಮಾಡಿಕೊಳ್ಳಬೇಕಾಯಿತು. ಹೀಗೆ ರಾಜ್ಯದಲ್ಲಿ ಪ್ರಥಮ ಬಾರಿಗೆ ಉದಯಿಸಿದ ಕಾಂಗ್ರೆಸ್-ಜೆ.ಡಿ.ಎಸ್.(ಜಾ), ಸಮ್ಮಿಶ್ರ ಸರ್ಕಾರದಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಗೆ ಸ್ಥಾನವಿರಲಿಲ್ಲ, ಏಕೆಂದರೆ ಅವರು ಯಾವುದೇ ಕಾರಣಕ್ಕೂ ಸಮ್ಮಿಶ್ರ ಸರ್ಕಾರದಲ್ಲಿ ಮಂತ್ರಿಯಾಗಬಾರದೆಂಬುದು ಶ್ರೀ ಹೆಚ್.ಡಿ. ದೇವೇಗೌಡರು ಷರತ್ತು ವಿಧಿಸಿದ್ದರು. ಆದರೂ ಒಟ್ಟಾರೆ ರಾಜ್ಯದ ಹಿತದೃಷ್ಟಿಯಿಂದ ಹಾಗೂ ಕಾಂಗ್ರೆಸ್ ಪಕ್ಷದ ಹಿತದೃಷ್ಟಿಯಿಂದ ಶ್ರೀ ಡಿ.ಕೆ. ಶಿವಕುರ್ಮಾ ತಮಗೆ ಮಾಡಲಾದ ಅಪಮಾನವನ್ನು ಸಹಿಸಿಕೊಂಡರು ಹಾಗೂ ಕಾಂಗ್ರೆಸ್ ಪಕ್ಷವನ್ನು ಪುನರ್ ಸಂಘಟಿಸುವಲ್ಲಿತಮ್ಮ ಸಮಯವನ್ನು ಮೀಸಲಿಟ್ಟರು. ತಮ್ಮ ವಿರುದ್ಧ ಶ್ರೀ ದೇವೇಗೌಡರು ನಡೆಸಿದ ಸೇಡಿನ ರಾಜಕಾರಣಕ್ಕೆ ತಮ್ಮದೇ ರೀತಿಯಲ್ಲಿ ಪ್ರತ್ಯುತ್ತರ ನೀಡುವಲ್ಲಿ ಶೀಘ್ರದಲ್ಲಿಯೇ ಯಶಸ್ವಿಯಾದರು.

2006ರ ಲೋಕಸಭಾ ಚುನಾವಣೆಯಲ್ಲಿ ಶ್ರೀ ದೇವೇಗೌಡರ ವಿರುದ್ಧ ರಾಜಕೀಯವಾಗಿ, ಸಾರ್ವಜನಿಕವಾಗಿ ಅಷ್ಟೇನು ಪರಿಚಿತರಲ್ಲದ ಅಜ್ಞಾತ ಹೆಣ್ಣು ಶ್ರೀಮತಿ ತೇಜಸ್ವಿನಿಗೌಡರವರನ್ನು ನಿಲ್ಲಿಸಿ ಗೆಲ್ಲಿಸುವ ಮೂಲಕ ಸೇಡು ತೀರಿಸಿಕೊಂಡರು. ನಮ್ಮ ಪಕ್ಕದ ರಾಜ್ಯವಾದ ಮಹಾರಾಷ್ಟ್ರದಲ್ಲಿ ಶ್ರೀ ವಿಲಾಸ್ರಾವ್ ದೇಶ್ಮುಖ್ ಸಮ್ಮಿಶ್ರ ಸರ್ಕಾರ್ಘಟ ಪಕ್ಷದೊಂದಿಗೆ ಸೆಣಸಾಟಕ್ಕಿಳಿದಾಗ ಸರ್ಕಾರ ಅಲ್ಪಮತದ ಅಪಾಯಕ್ಕೆ ಸಿಕ್ಕಿಕೊಂಡಿತ್ತು. ಆಗ್ಘಟ ಮತ್ತು ವಿರೋಧ ಪಕ್ಷಗಳು ಕಾಂಗ್ರೆಸ್ ಶಾಸಕರನ್ನು ಖರೀದಿಸುವ ಕುದುರೆ ವ್ಯಾಪಾರಕ್ಕೆ ಇಳಿದಿದ್ದವು. ತಕ್ಷಣ ಕಾಂಗ್ರೆಸ್ ಹೈಕಮಾಂಡಿನ ಆದೇಶದಂತೆ ಕಾರ್ಯಪ್ರವೃತ್ತರಾದ ಶ್ರೀ ಡಿ.ಕೆ. ಶಿವಕುಮಾರ್ ರವರು ಮಹಾರಾಷ್ಟ್ರ ಕಾಂಗ್ರೆಸ್ ಶಾಸಕರನ್ನು ಮುಂಬೈಯಿಂದ ಬೆಂಗಳೂರಿಗೆ ಕರೆದುಕೊಂಡು ಬಂದು ಸುಮಾರು 10-12 ದಿನಗಳ ಕಾಲ ಬೆಂಗಳೂರಿನ ವೈಭವಪೇತ ರೆಸಾರ್ಟ್ಒಂದರಲ್ಲಿ ಇರಿಸಿಕೊಂಡು ರಕ್ಷಣೆ ನೀಡಿದರು.

ಮುಂಬೈಯಲ್ಲಿ ಪರಿಸ್ಥಿತಿ ತಿಳಿಯಾಗಿ ಸರ್ಕಾರಕ್ಕೆ ಅಪಾಯವಿಲ್ಲವೆಂಬ ಸಂಗತಿ ಮನವರಿಕೆಯಾದ ನಂತರವಷ್ಟೇ ಮಹಾರಾಷ್ಟ್ರ ಶಾಸಕರನ್ನು ಕ್ಷೇಮವಾಗಿ ಕಳುಹಿಸಲಾಯಿತು. ಹೀಗೆ ಶ್ರೀ ಡಿ.ಕೆ. ಶಿವಕುಮಾರ್ ರವರ ಸಕಾಲಿಕ ರಾಜಕೀಯ ತಂತ್ರಗಾರಿಕೆ ಫಲಕೊಟ್ಟು ಮಹಾರಾಷ್ಟ್ರದಲ್ಲಿ ಮುಖ್ಯಮಂತ್ರಿ ಶ್ರೀ ವಿಲಾಸ್ರಾವ್ದೇಶ್ಮುಖ್ರವರ ಸರ್ಕಾರ ಯಾವುದೇ ಅಪಾಯ ಎದುರಿಸದೆ ಪಾರಾಗಿ ಮುಂದುವರೆಯುವಂತಾಯಿತು. ಇದರ ಎಲ್ಲಾ ಶ್ರೇಯಸ್ಸು ಶ್ರೀ ಡಿ.ಕೆ. ಶಿವಕುರ್ಮಾ ರವರಿಗೆ ಸಲ್ಲಬೇಕು. 2004ರಲ್ಲಿ ಪ್ರಥಮ ಬಾರಿಗೆ ಜೆ.ಡಿ.ಎಸ್.-ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ ರೂಪುಗೊಂಡಾಗ ಶ್ರೀ ಎಸ್.ಎಂ. ಕೃಷ್ಣ ರವರನ್ನು ಕಡೆಗಣಿಸಿ ಶ್ರೀ ಹೆಚ್.ಡಿ. ದೇವಗೌಡರ ಒಪ್ಪಿಗೆಯಂತೆ ಶ್ರೀ ಧರ್ಮಸಿಂಗ್ ಅವರನ್ನು ಮುಖ್ಯಮಂತ್ರಿ ಮಾಡಬೇಕಾಗಿ ಬಂದಾಗ ಶ್ರೀ ಎಸ್.ಎಂ. ಕೃಷ್ಣ ಅವರಿಗೆ ಬದಲಿಯಾಗಿ ಯಾವುದಾದರೊಂದು ಸ್ಥಾನ ಕೊಡಲೇಬೇಕೆಂದು ಪಕ್ಷದ ವರಿಷ್ಠರ ಮನವೊಲಿಸಿ ಶ್ರೀ ಎಸ್.ಎಂ. ಕೃಷ್ಣ ಅವರು ಮಹಾರಾಷ್ಟ್ರದ ರಾಜ್ಯಪಾಲರಾಗುವಂತೆ ಮಾಡುವಲ್ಲಿ ಯಶಸ್ವಿಯಾದರು. ಬಂಡಾಯ ಶಾಸಕರಾಗಿಯೂ ಕಾಂಗ್ರೆಸ್ ಪಕ್ಷದ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸುತ್ತಿದ್ದ ಶ್ರೀ ಡಿ.ಕೆ. ಶಿವಕುರ್ಮಾ ಆಗಲೇ ರಾಜಕೀಯವಾಗಿ ಮೂಲೆಗುಂಪಾಗಿದ್ದ ಶ್ರೀ ಎಸ್.ಎಂ. ಕೃಷ್ಣ ಅವರನ್ನು ಓಲೈಸಿ ಮರಳಿ ರಾಜಕೀಯರಂಗಕ್ಕೆ ಕರೆತಂದರು ಹಾಗೂ ಜನತಾದಳ ಅಧಿಕಾರದಲ್ಲಿದ್ದರೂ ಅಲ್ಪಮತದ ಬೆಂಬಲದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಶ್ರೀ ಎಸ್.ಎಂ. ಕೃಷ್ಣ ಅವರು ರಾಜ್ಯಸಭೆಗೆ ಸ್ಪರ್ಧಿಸುವಂತೆ ಮಾಡಿದರು.

ಜನತಾದಳದಿಂದಲೇ ಅಗತ್ಯವಾದ ಸದಸ್ಯರ ಬೆಂಬಲ ಸಿಗುವಂತೆ ವ್ಯೂಹರಚನೆ ಮಾಡಿ ಶ್ರೀ ಎಸ್.ಎಂ. ಕೃಷ್ಣ ರಾಜ್ಯಸಭೆಗೆ ಆಯ್ಕೆಯಾಗುವಂತೆ ಮಾಡಿದರು. ಶ್ರೀ ಎಸ್.ಎಂ. ಕೃಷ್ಣ ಅವರು ಪ್ರತಿಕೂಲ ಪರಿಸ್ಥಿತಿಯಲ್ಲಿ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದ ಪ್ರಸಂಗದ ಸಂಪೂರ್ಣಕೀರ್ತಿ, ಗೌರವ, ಶ್ರೀ ಡಿ.ಕೆ. ಶಿವಕುಮಾರ್ ಅವರ ವ್ಯೂಹರಚನೆಗೆ ಸಂದ ವಿಜಯ ಎಂದೇ ಭಾವಿಸಲಾಗುತ್ತಿದೆ. 1999ರಲ್ಲಿ ಶ್ರೀ ಎಸ್.ಎಂ. ಕೃಷ್ಣ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಆಯ್ಕೆಗೊಂಡಾಗ ಶ್ರೀ ಡಿ.ಕೆ. ಶಿವಕುಮಾರ್ ಅವರ ಹಿಂದೆ ಬೆನ್ನೆಲುಬಾಗಿ ನಿಂತು ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ರೀತಿಯಲ್ಲಿ ಜಯಗಳಿಸಿ ಸರ್ಕಾರ ರಚಿಸುವಲ್ಲಿ ಕಾರಣೀಭೂತರಾದರು.

ಶ್ರೀ ಎಸ್.ಎಂ. ಕೃಷ್ಣ ಚುನಾವಣಾ ಪೂರ್ವದಲ್ಲಿ ಪಾಂಚಜನ್ಯ ಮೊಳಗಿಸುವ ಮೂಲಕ ಚುನಾವಣಾ ಸಮರ ಆರಂಭಿಸಿದಾಗ, ಈ ಐತಿಹಾಸಿಕ ಯಾತ್ರೆಯನ್ನು ಆಯೋಜಿಸಿದವರು ಶ್ರೀ ಡಿ.ಕೆ. ಶಿವಕುಮಾರ್, ಇದರಿಂದಲೇ ಕಾಂಗ್ರೆಸ್ ಪಕ್ಷ 139 ಸ್ಥಾನಗಳನ್ನು ಗಳಿಸಿ ಸ್ವಂತ ಬಲದ ಮೇಲೆ ಸರ್ಕಾರವನ್ನು ರಚಿಸುವಂತಾಯಿತು. 1999ರಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಮತ್ತೊಮ್ಮೆ ಸಾತನೂರು ಕ್ಷೇತ್ರದಿಂದ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷ ಅನುಮತಿ ನೀಡಿತ್ತು. ಈ ಭಾರಿ ಅವರ ಎದುರಾಳಿ ಶ್ರೀ ಹೆಚ್.ಡಿ. ದೇವೇಗೌಡ ಅವರ ಪುತ್ರ ಶ್ರೀ ಹೆಚ್.ಡಿ. ಕುಮಾರಸ್ವಾಮಿ, ಶ್ರೀ ದೇವೇಗೌಡರು ರಾಜಕೀಯ ಸ್ಥಿತ್ಯಂತರದಿಂದ ಅಂದಿನ ಪ್ರಧಾನ ಮಂತ್ರಿಯಾಗಿದ್ದರು. ತಂದೆಯನ್ನೇ ರಾಜಕೀಯ ವ್ಯೂಹದಲ್ಲಿ ಮಣಿಸಿದ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಮಗ ಯಾವ ಲೆಕ್ಕ? ನಿರೀಕ್ಷಿಸಿದಂತೆ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಚುನಾವಣೆಯಲ್ಲಿ ಸೋತರು. ಶ್ರೀ ಡಿ.ಕೆ. ಶಿವಕುರ್ಮಾ ಸತತ 3ನೇ ಬಾರಿಗೆ ಮರಳಿ ಗೆಲುವು ಸಾಧಿಸಲು ಸಾಧ್ಯವಾಯಿತು. ಶ್ರೀ ಎಸ್.ಎಂ. ಕೃಷ್ಣ ಅವರು ಕ್ಯಾಬಿನೆಟ್ ದರ್ಜೆ ಸಚಿವರನ್ನಾಗಿ ನೇಮಿಸಿ ಮಹತ್ವದ ಸಹಕಾರ ಖಾತೆ ನೀಡುವ ಮೂಲಕ ಶ್ರೀ ಡಿ.ಕೆ. ಶಿವಕುಮಾರ್ ಅವರ ಶ್ರಮಕ್ಕೆತಕ್ಕ ಮನ್ನಣೆ ನೀಡಿದರು.(1999-2002). 2002ರಲ್ಲಿ ನಗರಾಭಿವೃದ್ಧಿ ಖಾತೆ ಸಚಿವರಾಗಿ ರಾಜ್ಯ ನಗರಯೋಜನಾ ಮಂಡಳಿಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು. ಸಚಿವ ಸಂಪುಟದ ಉಪ ಸಮಿತಿಯ ಅಧ್ಯಕ್ಷರಾಗಿ ಯುವಕರನ್ನು ಸಂಘಟಿಸಿ ಜೀವನದಲ್ಲಿ ನೆಲೆಗೊಳಿಸುವ ರಾಜೀವ್ಯುವ ಶಕ್ತಿ ಸಂಘಟನೆಗಳು ರಾಜ್ಯದಲ್ಲಿ ತಲೆಎತ್ತಲು ಕಾರಣೀಭೂತರಾದರು.



ವಿಶ್ವದಲ್ಲಿಯೇ ಮೊದಲನೆಯದು ಎನ್ನಿಸಿದ ಸ್ತ್ರೀ ಶಕ್ತಿ ಸಂಘಟನೆಗಳನ್ನು ಆರಂಭಿಸುವಲ್ಲಿ ಶ್ರೀ ಡಿ.ಕೆ. ಶಿವಕುಮಾರ್ ಅವರ ಪಾಲು ಮಹತ್ವದ್ದು. 2008ರಲ್ಲಿ ಶ್ರೀ ಎಸ್.ಎಂ. ಕೃಷ್ಣ ರಾಜ್ಯಪಾಲ ಪದವಿ ತ್ಯಜಿಸಿ ಪುನರ್ ರಾಜಕಾರಣಕ್ಕೆ ಬರಬೇಕುಎಂದು ಬಯಸಿದಾಗ ಅವರನ್ನು ಕರೆತಂದು ಮತ್ತೊಮ್ಮೆ ಕರ್ನಾಟಕದಿಂದ ರಾಜ್ಯಸಭೆಗೆ ಅವರನ್ನು ಆಯ್ಕೆಮಾಡುವಲ್ಲಿ ಶ್ರೀ ಡಿ.ಕೆ. ಶಿವಕುರ್ಮಾ ಮಹತ್ವದ ಪಾತ್ರ ವಹಿಸಿದರು. ಆನಂತರ ಶ್ರೀ ಎಸ್.ಎಂ. ಕೃಷ್ಣ ಕೇಂದ್ರ ಸಚಿವ ಸಂಪುಟಕ್ಕೆ ಸೇರಿ ವಿದೇಶಾಂಗ ವ್ಯವಹಾರಗಳ ಮಹತ್ವದ ಖಾತೆಯನ್ನು ನಿಭಾಯಿಸಿದರು. ಕನಕಪುರಕ್ಷೇತ್ರದಲ್ಲಿ ವಿಡಿಯೋ ಕಾನ್ಫರೆನ್ಸ್ ಸೌಲಭ್ಯವನ್ನು ಸ್ಥಾಪಿಸಿ ಆ ಮೂಲಕ ಕ್ಷೇತ್ರದ ಮತದಾರರೊಂದಿಗೆ ನೇರಾ ನೇರಾ ಸಂಪರ್ಕ ಸಾಧಿಸಿದ ದೇಶದ ಪ್ರಥಮ ಶಾಸಕರೆಂಬ ಕೀರ್ತಿಗೆ ಭಾಜನರಾದವರು ಶ್ರೀ ಡಿ.ಕೆ. ಶಿವಕುರ್ಮಾ, ಸಾತನೂರು ಹಾಗೂ ಕನಕಪುರ ಕಛೇರಿಗಳಲ್ಲಿ ಸ್ಥಾಪಿಸಿದ ವಿಡಿಯೋ ಸಂಪರ್ಕ ಸೌಲಭ್ಯದಿಂದಾಗಿ ಗ್ರಾಮೀಣ ಮತದಾರರುತಮ್ಮ ಶಾಸಕರೊಂದಿಗೆ ನೇರಾನೇರಾ ಮಾತುಕತೆ ನಡೆಸಿ ತಮ್ಮ ಕುಂದುಕೊರತೆಗಳನ್ನು ಹೇಳಿಕೊಂಡು ಅವುಗಳಿಂದ ಪರಿಹಾರ ಪಡೆದುಕೊಳ್ಳಲು ಸಾಧ್ಯವಾಯಿತು.ಇದರಿಂದ ಸಾರ್ವಜನಿಕರ ಅಪಾರ ಹಣ ಹಾಗೂ ವೇಳೆಯು ಅಪವ್ಯಯವಾಗುವುದು ತಪ್ಪಿತು. ಈ ಬಗ್ಗೆ ರಾಷ್ಟ್ರ ಮಟ್ಟದ ಇಂಡಿಯಾ ಟುಡೆಯಂತಹ ದಿನಪತ್ರಿಕೆಯು ಅವರ ಸಾಧನೆಯ ಬಗ್ಗೆ ತನ್ನ 2006 ಏಪ್ರಿಲ್ 17ನೇ ದಿನದ ಸಂಚಿಕೆಯಲ್ಲಿ ಭಾರತೀಯ ಶಾಸಕನೊಬ್ಬ ಕೈಗೊಂಡ ಈ ಮಹತ್ವದ ಸಾಧನೆಯನ್ನು ಗುರುತಿಸಿ ಶ್ಲಾಘಿಸಿತು. ಇಂದು ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದೆಯಾಗಿ ರಾಜಕೀಯ ಧ್ರುವತಾರೆಯಾಗಿರುವ ಕುಮಾರಿ ರಮ್ಯಾ ಕಾಂಗ್ರೆಸ್ ಪಕ್ಷಕ್ಕೆ ಕಾಲೂರಿದ್ದು ಶ್ರೀ ಡಿ.ಕೆ. ಶಿವಕುಮಾರ್ ಅವರ ಸತತ ಒತ್ತಾಸೆ ಹಾಗೂ ಪ್ರೇರಣೆಯಿಂದ. ಒಂದು ವರ್ಷದ ಹಿಂದೆ ಬೆಂಗಳೂರು ಅರಮನೆ ಆವರಣದಲ್ಲಿ ಬೃಹತ್ ಯುವಕಾಂಗ್ರೆಸ್ ಸಮಾವೇಶದಲ್ಲಿ ಕಾಂಗ್ರೆಸ್ ಉಪಾಧ್ಯಕ್ಷ ಶ್ರೀ ರಾಹುಲ್ಗಾಂಧಿ ಸಮ್ಮುಖದಲ್ಲಿ ಕುಮಾರಿ ರಮ್ಯಾ ಅವರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡರು. ಕೇವಲ ಕೆಲವೇ ದಿನಗಳ ಅಂತರದಲ್ಲಿ ಕುಮಾರಿ ರಮ್ಯಾ ಮತದಾರರ ಮೇಲೆ ವಿಶ್ವಾಸ, ಪ್ರಭಾವ ಬೀರಿದರಿಂದಾಗಿ ಅವರು ಉಪ ಚುನಾವಣೆಯಲ್ಲಿ ಎದುರಾಳಿಯ ಮಣ್ಣುಮುಕ್ಕಿಸಿ ಸಂಸದೆಯಾಗಿ ಸುಲಭ ಜಯಗಳಿಸಿದರು. 2013ರಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರ ಪೀಠಕ್ಕೆ ಮರಳಿ ಬಂದು ಶ್ರೀ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳಾಗಿ ಆಯ್ಕೆಗೊಂಡಾಗ ಪಕ್ಷದಲ್ಲಿನ ವಿರೋಧಿಗಳು ಡಿ.ಕೆ. ಶಿವಕುರ್ಮಾ ಅವರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿ ಕಪೋಲಕಲ್ಪಿತ ದಾಖಲೆಗಳನ್ನು ಪಕ್ಷದ ವರಿಷ್ಠರಿಗೆ ಕಳುಹಿಸಿ, ಡಿ.ಕೆ. ಶಿವಕುರ್ಮಾ ಅವರಿಗೆ ಸಚಿವ ಸ್ಥಾನ ತಪ್ಪುವಂತೆ ಮಾಡಿದರು. ಇದರಿಂದದೃತಿಗಡೆದ ಡಿ.ಕೆ. ಶಿವಕುಮಾರ್, ಪಕ್ಷದ ನಾಯಕತ್ವದ ವಿರುದ್ಧ ಬಹಿರಂಗವಾಗಿ ಯಾವುದೇ ಪ್ರತಿಭಟನೆ ತೋರದೆ, ತಮ್ಮ ವಿರುದ್ಧ ಆಪಾದನೆಗಳ ಬಗ್ಗೆ ನ್ಯಾಯಾಂಗ ತಜ್ಞರಿಂದ ವಿಮರ್ಶೆ ಮಾಡಿಸುವಂತೆ ವರಿಷ್ಠರನ್ನು ಕೋರಿಕೊಂಡರು ಪಕ್ಷದಿಂದ ನೇಮಿತರಾದ ಇಬ್ಬರು ನ್ಯಾಯಾಂಗ ತಜ್ಞರು ಡಿ.ಕೆ. ಶಿವಕುರ್ಮಾ ಯಾವುದೇ ರೀತಿಯ ಅಕ್ರಮ ಎಸಗಿಲ್ಲ ಎಂಬ ಅಭಿಪ್ರಾಯಕ್ಕೆ ಬಂದು ಡಿ.ಕೆ. ಶಿವಕುಮಾರ್ ಅವರನ್ನು ಆರೋಪ ಮುಕ್ತರನ್ನಾಗಿಸಿದರು.

ಇದರಿಂದ ಏಳೇ ತಿಂಗಳ ಅಲ್ಪಅವಧಿಯ ನಂತರ ಡಿ.ಕೆ. ಶಿವಕುರ್ಮಾ ಶ್ರೀ ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವ ಸ್ಥಾನ ಪಡೆದುಕೊಂಡರು. ಇಂಧನ ಖಾತೆಯಂತಹ ಪ್ರಮುಖ ಖಾತೆಯನ್ನುಅವರಿಗೆ ನೀಡಲಾಯಿತು. ಈ ವೇಳೆಯಲ್ಲಿಯೇ ಮಂತ್ರಿ ಹಾಗೂ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಉಪಚುನಾವಣೆಗಳು ಎದುರಾದವು. ತಮ್ಮ ಸಂಘಟನಾ ಶಕ್ತಿ, ರಾಜಕೀಯತಂತ್ರ ಹಾಗೂ ಚಾಣಾಕ್ಯ ನೀತಿ ಇವುಗಳನ್ನು ಧಾರಾಳವಾಗಿ ಬಳಸಿಕೊಂಡ ಡಿ.ಕೆ. ಶಿವಕುರ್ಮಾ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಅಭೂತಪೂರ್ವ ರೀತಿಯಲ್ಲಿ ವಿಜಯ ಸಾಧಿಸಲು ಕಾರಣೀಭೂತರಾದರಲ್ಲದೆ ಜನತಾದಳದಿಂದ ಎರಡು ಕ್ಷೇತ್ರಗಳನ್ನು ಕಸಿದುಕೊಂಡು ಕಾಂಗ್ರೆಸ್ಸಿಗೆ ಪ್ರತಿಷ್ಟೆಯನ್ನು ತಂದುಕೊಟ್ಟರು. ಇದರಿಂದ ಏಳೇ ತಿಂಗಳ ಅಲ್ಪಅವಧಿಯ ನಂತರ ಡಿ.ಕೆ. ಶಿವಕುಮಾರ್ ಶ್ರೀ ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವ ಸ್ಥಾನ ಪಡೆದುಕೊಂಡರು. ಇಂಧನ ಖಾತೆಯಂತಹ ಪ್ರಮುಖ ಖಾತೆಯನ್ನುಅವರಿಗೆ ನೀಡಲಾಯಿತು. ಇಂಧನ ಸಚಿವರಾಗಿ ಡಿ.ಕೆ. ಶಿವಕುಮಾರ್ ಜಡ್ಡುಗಟ್ಟಿದ್ದ ಇಂಧನ ಇಲಾಖೆಯನ್ನು ಅಮೂಲಾಗ್ರ ಸುಧಾರಣೆ ಮಾಡಲಾರಂಭಿಸಿದರು.

ಹಿಂದಿನ ಸರ್ಕಾರಗಳ ಅವಧಿಯಲ್ಲಿ ಸಹಿ ಮಾಡಲಾಗಿದ್ದ ಹಲವಾರು ವಿದ್ಯುತ್ ಖರೀದಿ ಒಪ್ಪಂದಗಳನ್ನು ರದ್ದುಗೊಳಿಸಿದರು. ಅಷ್ಟೇ ಅಲ್ಲ ಹಿಂದಿನ ಸರ್ಕಾರದ ಕಾಲಾವಧಿಯಲ್ಲಿ ಮಾಡಲಾದ ವಿದ್ಯುತ್ ಖರೀದಿಯಲ್ಲಿ ಅಕ್ರಮ ಕುರಿತ ಸದನ ಸಮಿತಿ ರಚನೆಗೆ ಕಾರಣರಾದರು. ರೈತ ಸೂರ್ಯ ಯೋಜನೆಯನ್ನು ರೂಪಿಸಿ ಭೂ ಮಾಲೀಕರಾದ ರೈತರು ಸ್ವಯಂ 1 ರಿಂದ 3 ಮೆ.ವ್ಯಾ. ಸೌರವಿದ್ಯುತ್ ಉತ್ಪಾದನೆ ಮಾಡುವಂತೆ ಅವಕಾಶ ಕಲ್ಪಿಸಿದರು. ರಾಜ್ಯ ಸರ್ಕಾರದ ಈ ಯೋಜನೆಯನ್ನು ಕೇಂದ್ರ ಸರ್ಕಾರ ಮುಕ್ತ ಕಂಠದಿಂದ ಪ್ರಶಂಸಿದೆಯಲ್ಲದೇ ಉಳಿದ ರಾಜ್ಯಗಳೂ ಕರ್ನಾಟಕದ ಮಾದರಿ ಅನುಸರಿಸುವಂತೆ ಮಾನ್ಯ ಕೇಂದ್ರ ಇಂಧನ ಸಚಿವರೇ ಕರೆ ನೀಡಿರುತ್ತಾರೆ. 2018ರಲ್ಲಿ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಮೊದಲಿಗೆ ಜಲಸಂಪನ್ಮೂಲ ನಂತರ ಹೆಚ್ಚುವರಿಯಾಗಿ ಕನ್ನಡ ಮತ್ತು ಸಂಸ್ಕತಿ ಖಾತೆಯನ್ನು ಪಡೆದ ಡಿ.ಕೆ.ಶಿವಕುರ್ಮಾರವರು ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದರು, ಮಹದಾಯಿ ಸಮಸ್ಯೆ ಪರಿಹಾರ, ಎತ್ತಿನಹೊಳೆ, ಮೇಕೆದಾಟು ಯೋಜನೆಗಳ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಿದ ಅವರು ರಾಜ್ಯದಲ್ಲಿ ಅತೀ ಹೆಚ್ಚು ಪ್ರಮಾಣದ ಚೆಕ್ ಡ್ಯಾಮ್ಗಳ ನಿರ್ಮಾಣಕ್ಕೆ ಪ್ರೋತ್ಸಾಹ ಧನ ನೀಡಿಕೆ ಮೂಲಕ ಉತ್ತೇಜಿಸಿದರು.

ಕೆ.ಆರ್.ಎಸ್ನ ಬೃಂದಾವನ ಉದ್ಯಾನವನವನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲು ಯೋಜನೆ ರೂಪಿಸಿದರಲ್ಲದೇ ಬೃಹತ್ ಕಾವೇರಿ ಪ್ರತಿಮೆ ನಿರ್ಮಾಣಕ್ಕೂ ನಿರ್ಧರಿಸಿದ್ದರು. ಮೈತ್ರಿ ಸರ್ಕಾರದ ಉಳಿವಿಗೆ ಟೊಂಕ ಕಟ್ಟಿ ನಿಂತಿದ್ದ ಶಿವಕುರ್ಮಾ ಅವರು ಪಕ್ಷದ ನಾಯಕತ್ವ ತಮಗೆ ಜವಬ್ದಾರಿ ವಹಿಸಿದ ಅನೇಕ ಉಪಚುನಾವಣೆಗಳಲ್ಲಿ ಪಕ್ಷ ಗೆಲುವಂತೆ ನೋಡಿಕೊಂಡಿರು ಬಳ್ಳಾರಿ ಲೋಕಸಭೆ ಕ್ಷೇತ್ರ ಕುಂದಗೋಳ ವಿಧಾನಸಭಾ ಕ್ಷೇತ್ರದ ಗೆಲುವಿನಲ್ಲಿ ಡಿ.ಕೆ. ಶಿವಕುರ್ಮಾ ಅವರ ಕೊಡುಗೆ ಗಮನಾರ್ಹ. 4 ದಶಕಗಳ ಕಾಲ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸೇನಾನಿಯಾಗಿ ಕಾರ್ಯ ನಿರ್ವಹಿಸಿರುವ ಡಿ.ಕೆ.ಶಿವಕುರ್ಮಾ ಅವರು ಯಾವುದೇ ಸಂದರ್ಭದಲ್ಲೂ ಯಾವುದೇ ಆಮಿಷಗಳಿಗೂ ಬಲಿಯಾಗದೇ ಪಕ್ಷ ನಿಷ್ಠೆಯನ್ನು ಬದಲಿಸಲಿಲ್ಲ. ಕಾಂಗ್ರೆಸ್ ಕಟ್ಟಾಳು ಆಗಿರುವ ಡಿ.ಕೆ.ಶಿವಕುರ್ಮಾ ಅವರ 2017ರಲ್ಲಿ ಹೈಕಮಾಂಡ್ ವಹಿಸಿದ ಜವಬ್ದಾರಿಯ ಮೇರೆಗೆ ಗುಜರಾತ್ ಕಾಂಗ್ರೆಸ್ ಶಾಸಕರನ್ನು ರಕ್ಷಿಸಿಟ್ಟುಕೊಂಡ ಅವರು ಅದಕ್ಕಾಗಿ ಭಾರಿ ಬೆಲೆಯನ್ನೇ ತೆರಬೇಕಾಯಿತಾದರೂ ವಿಚಲಿತರಾಗಲಿಲ್ಲ. ದ್ವೇಷದ ರಾಜಕಾರಣದಿಂದ ಕೇಂದ್ರ ಸರ್ಕಾರವು ಐಟಿ ಇಡಿ ಮತ್ತಿತರ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಅವರು ಮತ್ತು ಅವರ ಪರಿವಾರದ ಮೇಲೆ ದಾಳಿ ನಡೆಸಿದಲ್ಲದೇ ಡಿ.ಕೆ.ಶಿವಕುರ್ಮಾ ಅವರನ್ನು ಜೈಲಿಗೂ ಅಟ್ಟಿದರು. ಈ ಸಂದರ್ಭದಲ್ಲಿ ಸ್ವತಃ ಎಐಸಿಸಿ ಅಧ್ಯಕ್ಷೆ ಸೋನಿಯಾಗಾಂದಿ ಅವರು ಜೈಲಿಗೆ ಭೇಟಿ ಕೊಟ್ಟು ಡಿ.ಕೆ.ಶಿವಕುಮಾರ್ರವರಿಗೆ ಸಾಂತ್ವನ ಹೇಳಿದ್ದು, ಅವರ ಪಕ್ಷ ನಿಷ್ಠೆಗೆ ಸಿಕ್ಕ ಗೌರವಕ್ಕೆ ಸಾಕ್ಷಿ. ಡಿ.ಕೆ.ಶಿವಕುಮಾರ್ರವರು ಜೈಲಿನಲ್ಲಿದ್ದಾಗ ಲಕ್ಷಾಂತರ ಜನ ಬೀದಿಗಿಳಿದು ಮಾಡಿದ ಹೋರಾಟ ಹಾಗೂ ಅವರು ಜೈಲಿನಿಂದ ಬಂದ ಬಳಿಕ ಡಿ.ಕೆ.ಶಿವಕುರ್ಮಾ ರವರಿಗೆ ಸಿಕ್ಕ ಸ್ವಾಗತ ಅವರ ನಿಷ್ಠಾವಂತ ನಾಯಕತ್ವಕ್ಕೆ ಸಾಕ್ಷಿಯಾಗಿದೆ.

ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷದ ಸಂಘಟನೆ: ಇದಾದ ಕೆಲವೇ ದಿನಗಳಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಖಾಲಿ ಇದ್ದ ನಾಯಕತ್ವದ ಸ್ಥಾನಕ್ಕೆ ಅಂದರೆ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಶ್ರೀಮತಿ ಸೋನಿಯಾ ಗಾಂಧಿ ಅವರು ಮಾರ್ಚ್ 11, 2020ರಂದು ಡಿ.ಕೆ. ಶಿವಕುರ್ಮಾ ಅವರನ್ನು ನೇಮಿಸಿದರು. ಈ ನೇಮಕವಾದ ಕೆಲವೇ ದಿನಗಳಲ್ಲಿ ಕೋವಿಡ್ ಮಹಾಮಾರಿ ದೇಶದೆಲ್ಲೆಡೆ ಆವರಿಸಿತು. ಈ ಸಂದರ್ಭದಲ್ಲಿ ಮನೆಯಲ್ಲಿ ಕೂರದ ಶಿವಕುರ್ಮಾ ಅವರು ಪಕ್ಷದ ನಾಯಕರು ಹಾಗೂ ಕಾರ್ಯಕರ್ತರಿಗೆ ಉತ್ತೇಜನ ನೀಡಿ ಅವರು ಕೂಡ ಸಂಕಷ್ಟಕ್ಕೆ ಸಿಲುಕಿರುವ ಜನರಿಗೆ ಸಹಾಯ ಮಾಡಲು ಕರೆ ನೀಡಿದರು. ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಡಿ.ಕೆ. ಶಿವಕುಮಾರ್ ಅವರು ಪಕ್ಷವನ್ನು ಸಂಘಟಿಸಿದ ರೀತಿ ಎಲ್ಲಾ ರಾಜಕೀಯ ನಾಯಕರಿಗೆ ಮಾದರಿಯಾಗಿ ಉಳಿದಿದೆ ಎಂದರೆ ತಪ್ಪಾಗುವುದಿಲ್ಲ. ಕೋವಿಡ್ ಸಮಯದಲ್ಲಿ ಹಗಲಿರುಳು ತಾವೂ ಕೆಲಸ ಮಾಡಿ, ತಮ್ಮ ಪಕ್ಷದ ಜನರು ಜನರ ಬಳಿ ಹೋಗಿ ಕೆಲಸ ಮಾಡಿ ಅವರ ವಿಶ್ವಾಸ ಗೆಲ್ಲುವಂತೆ ಸೂಚನೆ ನೀಡಿದರು. ಲಾಕ್ ಡೌನ್, ಆದಾಯವಿಲ್ಲದೆ, ಮಾರುಕಟ್ಟೆ ಇಲ್ಲದೆ ಕಂಗಾಲಾಗಿದ್ದ ರೈತರು, ಕಾರ್ಮಿಕರು, ಬಡವರು, ಅಸಂಘಟಿತ ಕಾರ್ಮಿಕರ ಸಂಕಷ್ಟಗಳಿಗೆ ಸ್ಪಂದಿಸಿದರು. ಅವರ ಪರವಾಗಿ ಧ್ವನಿಯಾಗಿ ಸರ್ಕಾರದ ಗಮನ ಸೆಳೆದರು. ಮಾರುಕಟ್ಟೆ ಇಲ್ಲದೆ ರೈತರು ಕಂಗಾಲಾದಾಗ ರೈತರ ಜಮೀನಿನಿಂದ ಕೋಟ್ಯಂತರ ರೂಪಾಯಿ ಮೊತ್ತದ ಹಣ್ಣು ತರಕಾರಿ ಖರೀದಿ ಮಾಡಿ ನಂತರ ಅವುಗಳನ್ನು ಜನರಿಗೆ ಉಚಿತವಾಗಿ ಹಂಚುವಂತೆ ಮಾಡಿದರು.

ಕೋವಿಡ್ ನಿಂದ ಸಂಕಷ್ಟಕ್ಕೆ ಸಿಲುಕಿದ ಅಸಂಘಟಿತ ಕಾರ್ಮಿಕರಿಗೆ ಪರಿಹಾರ ನೀಡುವಂತೆ ಸರ್ಕಾರಕ್ಕೆ ಒತ್ತಾಯ ಹಾಕಿದ ಹೋರಾಟ ಮಾಡಿದರು. ಸರ್ಕಾರ ರಾಜ್ಯದ ಜನರನ್ನು ನಡು ನೀರಲ್ಲಿ ಕೈಬಿಟ್ಟಾಗ ಕಾಂಗ್ರೆಸ್ ಸಹಾಯ ಹಸ್ತ ಕಾರ್ಯಕ್ರಮ ಮೂಲಕ ಕೋವಿಡ್ ಸಂತ್ರಸ್ತರಿಗೆ ಸೇವೆ ಮಾಡಿದರು. ವಿರೋಧ ಪಕ್ಷವಾಗಿ ಜನರ ಸೇವೆ ಹೇಗೆ ಮಾಡಬಹುದು ಎಂದು ತೋರಿಸಿಕೊಟ್ಟು, ಸರ್ಕಾರಕ್ಕೂ ಮಾದರಿಯಾದರು. ಕೋವಿಡ್ ಸಮಯದಲ್ಲಿ ತಮ್ಮ ಊರುಗಳಿಗೆ ಮರಳಲು ಮುಂದಾದ ವಲಸೆ ಕಾರ್ಮಿಕರಿಂದ ಸರ್ಕಾರವೇ ಮೂರು ಪಟ್ಟು ಟಿಕೆಟ್ ದರ ವಸೂಲಿಗೆ ನಿಂತಾಗ ಅದರ ವಿರುದ್ಧ ಹೋರಾಡಿ ಪಕ್ಷದಿಂದ 1 ಕೋಟಿ ಚೆಕ್ ನೀಡಲು ಮುಂದಾದರು. ಆಗ ಸರ್ಕಾರ ಎಚ್ಚೆತ್ತು ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಿತು. ನಂತರ ಇದು ಇಡೀ ದೇಶಕ್ಕೆ ಮಾದರಿಯಾಯಿತು.. ಜನರಿಗೆ ಕೋವಿಡ್ ಸಮಯದಲ್ಲಿ ಸರ್ಕಾರದಿಂದ ಸರಿಯಾಗಿ ಆರೋಗ್ಯ ಸೇವೆ ಸಿಗದಿದ್ದಾಗ ಆರೋಗ್ಯ ಹಸ್ತ ಕಾರ್ಯಕ್ರಮ ಮೂಲಕ ಆರೋಗ್ಯ ಸೇವೆ, ಆಂಬುಲೆನ್ಸ್ ಸೇವೆ ಒದಗಿಸಿ ಜನ ಸಾಮಾನ್ಯರ ಕಷ್ಟಕ್ಕೆ ಸಹಯವಾಗಿ ರಾಜ್ಯದ ಪ್ರತಿ ಮನೆ ಮಗನಾದರು. ಜನರನ್ನು ರಕ್ಷಣೆ ಮಾಡಬೇಕಿದ್ದ ಸರ್ಕಾರ ಕೋವಿಡ್ ಸಮಯದಲ್ಲೂ ಭ್ರಷ್ಟಾಚಾರಕ್ಕೆ ಮುಂದಾದಾಗ ಅದ ವಿರುದ್ಧ ಧ್ವನಿ ಎತ್ತಿದರು. ಇಷ್ಟೇ ಅಲ್ಲ ಜನರಿಗೆ ಜೀವನ ನಡೆಸಲು ಸವಾಲಾಗಿದ್ದ ಬೆಲೆ ಏರಿಕೆ ವಿರುದ್ಧ, 100 ನಾಟೌಟ್, ಸೈಕಲ್ ಜಾಥಾ, ಎತ್ತಿನ ಬಂಡಿ ಹೋರಾಟ ಮಾಡಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದರು. ಚಾಮರಾಜನಗರ ಆಕ್ಸಿಜನ್ ದುರಂತದಲ್ಲಿ 36 ಜನ ಸತ್ತಾಗ ಸರ್ಕಾರ ಸುಳ್ಳು ಲೆಕ್ಕ ನೀಡಿ ಯಾಮಾರಿಸಲು ಪ್ರಯತ್ನಿಸಿತು. ಆಗ ಸಿದ್ದರಾಮಯ್ಯ ಅವರ ಜತೆ ಸೇರಿ ಅಲ್ಲಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸತ್ತವರ ಸಂಖ್ಯೆ 36 ಎಂದು ತಿಳಿಸಿದರು. ಅಲ್ಲದೆ ಪಕ್ಷದವತಿಯಿಂದ ಸಂತ್ರಸ್ತರ ಕುಟುಂಬಕ್ಕೆ ತಲಾ 1 ಲಕ್ಷ ಪರಿಹಾರ ನೀಡಿದರು. ಇನ್ನು ರಾಷ್ಟ್ರೀಯ ಕಾಂಗ್ರೆಸ್ ವತಿಯಿಂದ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿದಾಗ, ಮತ್ತೆ ತಮ್ಮ ಕಾರ್ಯಕರ್ತರನ್ನು ಜನರತ್ತ ಕಳುಹಿಸಿ ರಾಜ್ಯದಲ್ಲಿ ಯಶಸ್ವಿಯಾಗಿ ಸದಸ್ಯತ್ವ ನೋಂದಣಿ ಅಭಿಯಾನ ಮಾಡಿದರು. ಪಕ್ಷದ ಸದಸ್ಯತ್ವ ಅಭಿಯಾನ ಯಶಸ್ವಿ ಜಾರಿ ಹಾಗೂ ರಾಜ್ಯದಲ್ಲಿ 78 ಲಕ್ಷ ಸದಸ್ಯತ್ವ ನೋಂದಣಿ ಮೂಲಕ ದೇಶದಲ್ಲಿ ಪ್ರಥಮ ಸ್ಥಾನ ಪಡೆದು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದರು. ಕಾವೇರಿ ಜಲಾನಯನ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ, ವಿದ್ಯುತ್ ಉತ್ಪಾದನೆ ಸೇರಿದಂತೆ ಹಲವು ಪ್ರಯೋಜನಗಳನ್ನು ಹೊಂದಿರುವ ಮೇಕೆದಾಟು ಯೋಜನೆಗೆ ಸರ್ಕಾರ ನಿರ್ಲಕ್ಷ್ಯ ವಹಿಸಿದಾಗ ಈ ಯೋಜನೆ ಆಗ್ರಹಿಸಿ, ಈ ಭಾಗದಲ್ಲಿ 160 ಕಿ.ಮೀ ಪಾದಯಾತ್ರೆ ಮಾಡಿದರು.

ಈ ಹಂತದಲ್ಲಿ ಸರ್ಕಾರ ಸುಳ್ಳು ಕೇಸ್ ದಾಖಲಿಸಿ ಹೋರಾಟ ಹತ್ತಿಕ್ಕಲು ಪ್ರಯತ್ನಿಸಿತಾದರೂ ಕೆಚ್ಚೆದೆಯಿಂದ ತಾವು ಹಾಗೂ ಪಕ್ಷದ ನಾಯಕರು ಕಾರ್ಯಕರ್ತರನ್ನು ಸಂಘಟಿಸಿ ಪಾದಯಾತ್ರೆ ಯಶಸ್ವಿ ಮಾಡಿದರು. ಕೇಂದ್ರ ಸರ್ಕಾರದ ಕೃಷಿ ಕರಾಳ ಕಾಯ್ದೆ ವಿರುದ್ಧ ಬೀದಿಗಿಳಿದು ಹೋರಾಟ ಮಾಡಿದರು. ರೈತರ ಬೆನ್ನಿಗೆ ನಿಂತರು. ಇನ್ನು ಭ್ರಷ್ಟಾ ಸರ್ಕಾರದ ಭ್ರಷ್ಟಾಚಾರ, 40% ಕಮಿಷನ್, ಪೇ ಸಿಎಂ, ನೇಮಕಾತಿ ಅಕ್ರಮ ವಿರುದ್ಧ ಬೀದಿಗಿಳಿದು ಹೋರಾಟ ಮಾಡಿದರು. ಆಮೂಲಕ ಅನ್ಯಾಯಕ್ಕೆ ಒಳಗಾದವರ ಧ್ವನಿಯಾಗಿ ರೂಪುಗೊಂಡರು. ನಿರುದ್ಯೋಗ ಸಮಸ್ಯೆ ಹೆಚ್ಚಳದ ವಿರುದ್ಧ ಹಲವು ಮಾದರಿಯ ಹೋರಾಟ ಹಮ್ಮಿಕೊಂಡರು. 75ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಸ್ವಾತಂತ್ರ್ಯ ನಡಿಗೆ ಅಭೂತಪೂರ್ವ ಕಾರ್ಯಕ್ರಮ ಆಯೋಜನೆ ಮಾಡಿ ಸರ್ಕಾರಕ್ಕಿಂತ ಅದ್ಭುತ ಹಾಗೂ ವಿಶೇಷವಾಗಿ ಸ್ವಾತಂತ್ರ್ಯ ದಿನ ಆಚರಣೆ ಮಾಡಿದರು. ರಾಹುಲ್ ಗಾಂಧಿ ಅವರು ಭಾರತ ಜೋಡೋ ಯಾತ್ರೆ ಆರಂಭಿಸಿದ ನಂತರ ಕರ್ನಾಟಕದಲ್ಲಿ 21 ದಿನಗಳ ಕಾಲ 550 ಕಿ.ಮೀ ಉದ್ದದ ಭಾರತ ಜೋಡೋ ಯಾತ್ರೆ ಯಶಸ್ವಿ ಆಯೋಜನೆ ಮಾಡಿದರು. ಈ ಯೋಜನೆ ಹಾದುಹೋದ ಮಾರ್ಗದಲ್ಲಿ ಕಾಂಗ್ರೆಸ್ ಪಕ್ಷ 2023ರ ಸಾರ್ವತ್ರಿಕ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸುವಲ್ಲಿ ಪ್ರಮುಖ ಕಾರಣವಾಯಿತು.. ಪ್ರಜಾಧ್ವನಿ ಯಾತ್ರೆ ಮೂಲಕ ರಾಜ್ಯದ ಮೂಲೆ ಮೂಲೆ ಪ್ರವಾಸ ಮಾಡಿ ಎಲ್ಲ ವರ್ಗಗಳ ಜನರ ಸಂಕಷ್ಟ ಆಲಿಸಿದರು. ಅವುಗಳಿಗೆ ಪರಿಹಾರ ಕಂಡುಕೊಳ್ಳು ಯೋಜನೆಗಳನ್ನು ರೂಪಿಸಲು ನೆರವಾದರು. ಮೀನುಗಾರರು, ನೇಕಾರರು, ತಿಗಲರು, ಮಡಿವಾಳ, ಲೈಂಗಿಕ ಅಲ್ಪಸಂಖ್ಯಾತ ಸಮುದಾಯಗಳ ಕಷ್ಟ ಆಲಿಸಿದರು. ಈ ಕಾರ್ಯಕ್ರಮಗಳಲ್ಲಿ ಆಯಾ ಸಮುದಾಯಗಳ ಸಮಸ್ಯೆ ಬೇಡಿಕೆ ಆಲಿಸಿ, ಅವರಿಗೆ ಸೂಕ್ತ ನ್ಯಾಯ ದೊರಕಿಸಿಕೊಡುವ ಭರವಸೆ ಕೊಟ್ಟರು. ತಮ್ಮ ಮಾತಿನಂತೆ ಪಕ್ಷದ ಪ್ರಣಾಳಿಕೆಯಲ್ಲಿ ಎಲ್ಲಾ ವರ್ಗದ ಜನರ ಕಲ್ಯಾಣಕ್ಕೆ ಕಾರ್ಯಕ್ರಮ ರೂಪಿಸಲಾಯಿತು . ಪಕ್ಷದ ಸಂಘಟನೆ ಚಾಲಕರ ಘಟಕ, ಅಪಾರ್ಟ್ ಮೆಂಟ್ ನಿವಾಸಿಗಳ ಘಟಕ ಆರಂಭಿಸಿದರು. ರಾಜ್ಯದಲ್ಲಿ ನೆರೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ನೆರೆ ಸಂದರ್ಭದಲ್ಲಿ ಅಲ್ಲಿನ ಜನರಿಗೆ ನೆರವಾಗುವಂತೆ ಪಕ್ಷದ ಕಾರ್ಯಕರ್ತರು ನಾಯಕರಿಗೆ ಕರೆ ಕೊಟ್ಟರು. ಕಾಂಗ್ರೆಸ್ ಪಕ್ಷದ ಬಗ್ಗೆ ಜನರ ವಿಶ್ವಾಸ ಹೆಚ್ಚಿಸಿ, ಅನ್ಯ ಪಕ್ಷದ ನಾಯಕರನ್ನು ಪಕ್ಷಕ್ಕೆ ಕರೆ ತಂದರು. ಜೆಡಿಎಸ್ ಪಕ್ಷದ ಅನೇಕ ಶಾಸಕರು, ವಿಧಾನಸಭಾ ಸದಸ್ಯರು, ಬಿಜೆಪಿಯ ಶಾಸಕರು ಹಾಗೂ ಪರಿಷತ್ ಸದಸ್ಯರುಗಳನ್ನು ಪಕ್ಷಕ್ಕೆ ಸೇರಿಸಿಕೊಂಡು ಪಕ್ಷದ ಬಲವರ್ಧನೆ ಮಾಡಿದರು. ನಾ ನಾಯಕಿ ಕಾರ್ಯಕ್ರಮದ ಮೂಲಕ ಮಹಿಳೆಯರಿಗೆ ಉತ್ತೇಜನ ನೀಡಿ ಮಹಿಳೆಯರನ್ನು ಕಾಂಗ್ರೆಸ್ ಪಕ್ಷದ ಕಡೆ ಸೆಳೆಯುವಲ್ಲಿ ಯಶಸ್ವಿಯಾದರು. ಎಲ್ಲಾ ಸಮುದಾಯ, ಧರ್ಮಗಳ ಧರ್ಮಗುರುಗಳು, ಮಠಾಧೀಶರ ವಿಶ್ವಾಸ ಪಡೆದಿದ್ದು, ಅವರ ಬೆಂಬಲ ಪಡೆದು ಪಕ್ಷವನ್ನು ಸಂಘಟಿಸಿ ಶಕ್ತಿ ತುಂಬಿದರು. ಇನ್ನು ಬಹಳಷ್ಟು ಜನ ಮೂಗಿನ ಮೇಲೆ ಬೆರಳಿಟ್ಟು ನೋಡುವಂತೆ ಪಕ್ಷದ ಎಲ್ಲಾ ಹಿರಿಯ ಹಾಗೂ ಕಿರಿಯ ನಾಯಕರನ್ನು ಒಟ್ಟಾಗಿ ತೆಗೆದುಕೊಂಡು ಹೋಗುವಲ್ಲಿ ಯಶಸ್ವಿಯಾದರು.

ಕಳೆದ ಮೂರು ವರ್ಷಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಹೇಗೆಲ್ಲಾ ಸಂಘಟನೆ ಮಾಡಿ ಪಕ್ಷಕ್ಕೆ ಶಕ್ತಿ ತುಂಬಬಹುದೋ ಆ ಎಲ್ಲಾ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಪಕ್ಷವನ್ನು ಮುನ್ನಡೆಸಿದರು. ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಪಕ್ಷ 2023ರ ವಿಧಾನಸಭೆ ಚುನಾವಣೆಯಲ್ಲಿ 136 ಕ್ಷೇತ್ರಗಳಲ್ಲಿ ಗೆದ್ದು ಭರ್ಜರಿ ಬಹುಮತದೊಂದಿಗೆ ಸರ್ಕಾರ ರಚನೆ ಮಾಡಿತು. ಈ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿ, ಜಲಸಂಪನ್ಮೂಲ ಇಲಾಖೆ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಅಧಿಕಾರ ನಡೆಸಿದರು.

ಜಲಸಂಪನ್ಮೂಲ ಸಚಿವರಾಗಿ ಎತ್ತಿನ ಹೊಳೆ ಯೋಜನೆಗೆ ಇದ್ದ ಅಡೆತಡೆಗಳನ್ನು ನಿವಾರಿಸಿ ನೀರನ್ನು ಆ ಭಾಗದಿಂದ ಹೊರಗೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಅಧೇ ರೀತಿ ಬೆಂಗಳೂರಿನ 110 ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವ ಕಾವೇರಿ 5ನೇ ಹಂತದ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಿದ ಹೆಗ್ಗಳಿಕೆ ಇವರದ್ದಾಗಿದೆ. ಇದರ ಜತೆಗೆ ಕೆರ್ಆ ಎಸ್ ನಲ್ಲಿ ಕಾವೇರಿ ಆರತಿ ಕಾರ್ಯಕ್ರಮ, ಬೆಂಗಳೂರಿನ ಇತಿಹಾಸದಲ್ಲಿ ಮೊದಲ ಬಾರಿಗೆ ಸ್ಯಾಂಕಿ ಕೆರೆಯಲ್ಲಿ ಕಾವೇರಿ ಆರತಿ ಕಾರ್ಯಕ್ರಮ ಆಯೋಜಿಸಿದರು. ಇನ್ನು ಮೆಕೆದಾಟು ಹಾಗೂ ಕಲಸಾ ಬಂಡೂರಿ ಯೋಜನೆ ಕೇಂದ್ರ ಅನುಮತಿ ಸಿಕ್ಕ ತಕ್ಷಣ ಯೋಜನೆ ಜಾರಿಗೆ ಪೂರ್ವಸಿದ್ಧತಾ ಕಾರ್ಯಗಳನ್ನು ನಡೆಸುತ್ತಿದ್ದಾರೆ. ಇನ್ನು ಬೆಂಗಳೂರನ್ನು ಜಾಗತಿಕ ನಗರವನ್ನಾಗಿ ಮಾಡಲು ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯನ್ನು ಪರಿಚಯಿಸಿದರು.

ಟನಲ್ ರಸ್ತೆ, ಡಬಲ್ ಡೆರ್ಕ್ಕ ಮೇಲ್ಸೇತುವೆ, ಎಲಿವೇಟೆಡ್ ಕಾರಿರ್ಡಾ, 300 ಕಿ.ಮೀ ಬಫ್ರ ರಸ್ತೆಗಳ ನಿರ್ಮಾಣ, ಮೆಟ್ರೋ 3ನೇ ಹಂತದ ಯೋಜನೆ ಡಿಪಿಆರ್, ಬೆಂಗಳೂರಿನ ನಾಲ್ಕು ದಿಕ್ಕಿನಲ್ಲಿ ಹೊರ ವಲಯಗಳಲ್ಲಿ ಕಸ ವಿಲೇವಾರಿ ಘಟಕ ಸ್ಥಾಪನೆ, ಪ್ರವಾಸಿಗರ ಆಕರ್ಷಣೆಗೆ ಸ್ಕೈ ಡೆಕ್ ನಿರ್ಮಾಣದಂತಹ ಯೋಜನೆಗಳನ್ನು ರೂಪಿಸಿದರು. ಇನ್ನು ಪಾಲಿಕೆ ಪರಿಣಾಮಕಾರಿ ಆಡಳಿತಕ್ಕೆ ಗ್ರೇರ್ಡ ಬೆಂಗಳೂರು ಪ್ರಾಧಿಕಾರ ರಚನೆಗೆ ಮುಂದಾಗಿದ್ದಾರೆ. ಇನ್ನು ಇದೇ ಸಮಯದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷ ಸಂಘಟನೆಯನ್ನು ಮುಂದುವರಿಸಿಕೊಂಡು ಬಂದಿದ್ದಾರೆ. ಮೂಡಾ ಪ್ರಕರಣದಲ್ಲಿ ವಿರೋಧ ಪಕ್ಷಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಸುಳ್ಳು ಆರೋಪ ಮಾಡಿ, ಪಾದಯಾತ್ರೆಗೆ ಮುಂದಾದಾಗ, ಅದಕ್ಕೆ ಪ್ರತಿಯಾಗಿ ಡಿ.ಕೆ. ಶಿವಕುರ್ಮಾ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ಜನಾಂದೋಲನ ಸಮಾವೇಶಗಳನ್ನು ಮಾಡಿ ಸಿದ್ದರಾಮಯ್ಯ ಅವರ ಬೆನ್ನಿಗೆ ನಿಂತರು. ಇನ್ನು ಮಹಾತ್ಮಾ ಗಾಂಧಿಜಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮವನ್ನು ಬೆಳಗಾವಿಯಲ್ಲಿ ನಡೆಸಿದರು.

ಇನ್ನು ಎಐಸಿಸಿ ನಿರ್ದೇಶನದಂತೆ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್ ಸಮಾವೇಶವನ್ನು ನಡೆಸಿ ಪಕ್ಷವನ್ನು ಸಮರ್ಥವಾಗಿ ಮುನ್ನಡೆಸಿದ್ದಾರೆ. ಇನ್ನು ಪಕ್ಷವನ್ನು ಅಧಿಕಾರಕ್ಕೆ ತಂದ ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ ನೀಡುವ ಉದ್ದೇಶದಿಂದ ಗ್ಯಾರಂಟಿ ಅನುಷ್ಠಾನ ಸಮಿತಿ ರಚಿಸಿ ತಲ್ಲೂಕು, ಜಿಲ್ಲಾ ಹಾಗೂ ಬ್ಲಾಕ್ ಮಟ್ಟದಲ್ಲಿ ಕಾರ್ಯಕರ್ತರಿಗೆ ಅಧಿಕಾರ ಕೊಟ್ಟು ಗೌರವಿಸಿದರು. ಅಲ್ಲದೆ ಮತ ಕಳ್ಳತನ ವಿರುದ್ಧ ಹೋರಾಟ, ಸಮಾವೇಶ, ಸಹಿ ಸಂಗ್ರಹ ಅಭಿಯಾನವನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಮುನ್ನಡೆಸಿದ್ದಾರೆ. ಇನ್ನು ಮನರೇಗಾ ಮರುಜಾರಿಗೆ ಆಗ್ರಹಿಸಿ ಎಲ್ಲಾ ತಾಲೂಕು ಮಟ್ಟದಲ್ಲಿ ಪಾದಯಾತ್ರೆಗೆ ಕರೆ ನೀಡಿ ಪಕ್ಷದ ವತಿಯಿಂದ ಜನ ಜಾಗೃತಿ ಮಾಡಲಾಗುತ್ತಿದೆ. ರಾಜ್ಯದಲ್ಲಿ ಜಿಬಿಎ ಪಾಲಿಕೆ ಚುನಾವಣೆಯಲ್ಲಿ ಮತದಾರರ ಪಟ್ಟಿ ಪಾರದರ್ಶಕವಾಗಿ ಕಾಪಾಡಲು ಹಾಗೂ ಅಕ್ರಮ ತಪ್ಪಿಸಲು ಎಲ್ಲಾ ಕ್ಷೇತ್ರಗಳಲ್ಲಿ ಬಿಎಲ್ಎ ತರಬೇತಿ ಶಿಬಿರ ನಡೆಸುತ್ತಿದ್ದಾರೆ. ಇನ್ನು ಕಾಂಗ್ರೆಸ್ ಕಚೇರಿ ಕಾಂಗ್ರೇಸಿಗರ ಪಾಲಿನ ದೇವಾಲಯ ಎಂದು ಕರೆದಿದ್ದು, ರಾಜ್ಯದೆಲ್ಲೆಡೆ. ನೂರು ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ತಯಾರಿ ನಡೆಸುತ್ತಿದ್ದಾರೆ. ಆರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳಲ್ಲಿ ಪಕ್ಷದ ಗೆಲುವು ಸಾಧಿಸುವಂತೆ ನೋಡಿಕೊಂಡರು. ಇನ್ನು ವೈಯಕ್ತಿಕ ಜೀವನದಲ್ಲಿ ಪ್ರಗತಿಪರ ರೈತರಾಗಿ, ವಸತಿ ಯೋಜನೆಗಳ ನಿರ್ಮಾತೃರಾಗಿರುವ ಡಿ.ಕೆ. ಶಿವಕುರ್ಮಾ, ನ್ಯಾಷನಲ್ ಎಜುಕೇಶನ್ ಫೌಂಡೇಷನ್ನ ಸ್ಥಾಪಕ ಅಧ್ಯಕ್ಷರಾಗಿ ಇಂಜಿನಿಯರಿಂಗ್, ನರ್ಸಿಂಗ್ ಹಾಗೂ ಮ್ಯಾನೇಜ್ಮೆಂಟ್ ವಿದ್ಯಾಸಂಸ್ಥೆಗಳನ್ನು ಯಶಸ್ವಿಯಾಗಿ ನಡೆಸುತ್ತಿದ್ದಾರೆ. ಅಲ್ಲದೆ ವಿಶ್ವಮಟ್ಟದ ಎರಡು ಪ್ರಾಥಮಿಕ ಶಾಲೆಗಳನ್ನು ನಡೆಸುತ್ತಿದ್ದಾರೆ. ಶ್ರೀ ಡಿ.ಕೆ. ಶಿವಕುಮಾರ್ ನೇತೃತ್ವದ ಡಿ.ಕೆ.ಎಸ್. ಚಾರಿಟೇಬಲ್ ಟ್ರಸ್ಟ್ಕ್ಷೇತ್ರದ ಹಲವಾರು ಸಮಸ್ಯಾತ್ಮಕ ಗ್ರಾಮಗಳಲ್ಲಿ ಶುದ್ಧಕುಡಿಯುವ ನೀರು ತಯಾರಿಕಾ ಘಟಕಗಳನ್ನು ಸ್ಥಾಪಿಸಿ ಕೇವಲ 10 ಪೈಸೆಗೆ ಒಂದು ಲೀಟರ್ ಪರಿಶುದ್ಧ ಕುಡಿಯುವ ನೀರು ಸಿಗುವಂತೆ ಮಾಡಿದೆ.

100ಕ್ಕೂ ಹೆಚ್ಚು ಗ್ರಾಮಗಳಲ್ಲಿ ಈಗಾಗಲೇ ಸ್ಥಾಪಿಸಲಾಗಿರುವ ಈ ಸ್ಥಾವರಗಳ ಮೂಲಕ ಪರಿಶುದ್ಧ ಕುಡಿಯುವ ನೀರು ದೊರಕಿಸಿಕೊಡುವ ಮೂಲಕ ಅಶುದ್ಧ ನೀರಿನ ಬಳಕೆಯಿಂದ ಜನರಿಗಾಗುತ್ತಿದ್ದ ರೋಗರುಜಿನಗಳನ್ನು ನಿವಾರಿಸುವಲ್ಲಿ ಡಿ.ಕೆ.ಎಸ್. ಚಾರಿಟೇಬಲ್ ಟ್ರಸ್ಟ್ ಯಶಸ್ವಿಯಾಗಿದೆ. ಈ ಯೋಜನೆಯನ್ನು ಕಾಲಾನುಕ್ರಮದಲ್ಲಿ ಶ್ರೀ ಡಿ.ಕೆ.ಸುರೇಶ್ ಪ್ರತಿನಿಧಿಸುತ್ತಿರುವ ಇಡೀ ಬೆಂಗಳೂರು ಗ್ರಾಮಾಂತರ ಕ್ಷೇತ್ರಕ್ಕೆ ವಿಸ್ತರಿಸುವ ಕಾರ್ಯಕ್ರಮವನ್ನು ಡಿ.ಕೆ.ಎಸ್. ಚಾರಿಟೇಬಲ್ ಟ್ರಸ್ಟ್ ಹಾಕಿಕೊಂಡಿದೆ.

ಒಂದನೇಯ ಪುಟದಿಂದ

ಯಾದವ್ ಸಮಾಜದ ರಾಜ್ಯ ಅಧ್ಯಕ್ಷ ಎಂಎಲ್ಸಿ ಶ್ರೀನಿವಾಸ ಸಚಿವ ಸ್ಥಾನ ನೀಡಿ

ಸಮಾಜದಲ್ಲಿ ರಾಜಕೀಯ ಬೆಳವಣಿಗೆ ಕಾಣುವುದು ಅಪರೂಪ ಹಾಗಾಗಿ ಡಿ ಟಿ ಶ್ರೀನಿವಾಸ ಅವರಿಗೆ ಸಚಿವ ಸ್ಥಾನ ನೀಡಲು ಒತ್ತಾಯಿಸುತ್ತೇವೆ ಎಂದರು

ಈ ಸಂದರ್ಭದಲ್ಲಿ. ಸಂಘದ ಉಪಾಧ್ಯಕ್ಷ ಬಸವರಾಜ. ಪ್ರಧಾನ ಕಾರ್ಯದರ್ಶಿ ಮಂಜುನಾಥ ಯಾದವ್ ವೆಂಕಟೇಶ್ ಸೇರಿದಂತೆ ಇತರರು ಸುದ್ದಿಗೋಷ್ಠಿಯಲ್ಲಿ ಇದ್ದರು.

ದೇಶದಲ್ಲಿ ಸಂಸ್ಕೃತಿ. ಸಂಸ್ಕಾರ. ಪರಂಪರೆ.ಆಧುನಿಕತೆ. ಉಳಿವಿಗಾಗಿ ಪಾದಯಾತ್ರೆ ಉದ್ದೇಶ

ಧಾರ್ಮಿಕ ಸಭೆಯಲ್ಲಿ ವಿಶೇಷ ಆಶೀರ್ವಚನ ರ.ಜೈನ ಧರ್ಮದ ಆಚಾರ್ಯ ವಿಮಲ್ ಸಾಗರ್ ಸುರೇಶ್ವರಜೀ ಅಭಿಮತ

ರಲ್ಲಿ ಜನಿಸಿದ್ದು. ನಾನು 13 ವರ್ಷದಲ್ಲಿ ಇದ್ದಾಗ ಜೈನ ಧರ್ಮದ ದೀಕ್ಷೆ ಪಡೆದು ಕರ್ನಾಟಕ. ಆಂಧ್ರಪ್ರದೇಶ. ಗುಜರಾತ್. ಮಧ್ಯಪ್ರದೇಶ. ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳ ಸೇರಿದಂತೆ ಇಲ್ಲಿಯವರೆಗೂ ಸುಮಾರು ಒಂದು ಲಕ್ಷ ಕಿಮೀ ಪಾದಯಾತ್ರೆಯನ್ನು ಮಾಡಿದ್ದೇನೆ. ರಾಯಚೂರು ಜಿಲ್ಲೆಯ ಪಕ್ಕದ ರಾಜ್ಯ ತೆಲಂಗಾಣ ರಾಜ್ಯದಲ್ಲಿ 09 ತಿಂಗಳ ಕಾಲ ಮನುಕುಲದ ಒಳಿತಿಗಾಗಿ ಜಾಗ್ರತೆಗಾಗಿ ಪಾದಯಾತ್ರೆ ನಡೆಸುವುದಾಗಿ ತಿಳಿಸಿದರು.

ಈಗಾಗಲೇ ಮಕ್ಕಳ. ಯುವಕರು ಪಾಶ್ಚಿಮಾತ್ಯ ದೇಶಗಳ ಮೊಬೈಲ್ ಜಾಲತಾಣಗಳಲ್ಲಿ ಅತೀ ವೇಗವಾಗಿ ಮುಳುಗಿ ಪರಂಪರೆ ಮರೆತು ದಾರಿ ತಪ್ಪಿ ಮೋಜು.ಮಸ್ತಿ. ಬೆಟ್ಟಿಂಗ್ ಹಲವು ಚಟುವಟಿಕೆಗಳಿಗೆ ದಾಸರು ಯಾಗಿದ್ದು. ತಮ್ಮ ಸುಂದರ ಜೀವನವನ್ನು ಹಾಳು ಮಾಡಿಕೊಂಡು ತಮ್ಮ ಪ್ರಾಣಕ್ಕೆ ತುತ್ತಾಗುತ್ತಿರುವುದು ಎಂತಹ ದುರಂತದ ಸಂಗಾತಿ.

ಹಾಗಾಗಿ ಶಾಲಾ- ಕಾಲೇಜುಗಳಲ್ಲಿ ವಾಸ್ತವ್ಯ ಹೂಡಿ ಅಲ್ಲಿನ ವಿದ್ಯಾರ್ಥಿ ಮಕ್ಕಳಿಗೆ ದೇಶಭಕ್ತ. ದೇಶಾಭಿಮಾನ ಹಾಗೂ ಸಮಾಜದ ಸೇವೆ ಕಾರ್ಯ ಬಗ್ಗೆ ಮಾಹಿತಿ ಅರಿವು ಮೂಡಿಸುವ ಸಲುವಾಗಿ ಪಾದಯಾತ್ರೆ ಕೈಗೊಂಡು ಸಾಮಾಜಿಕ ಬದಲಾವಣೆ ತರುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿವೆ ಎಂದು ಹೇಳಿದರು.

ಗುರುದ್ವಾರ ಮಜೀದ್ ಸೇರಿದಂತೆ ಯಾವುದೇ ಧರ್ಮಗಳ ಸ್ವಾಗತಿಸಿದರೆ ಅಲ್ಲಿಗೆ ಹೋಗಿ ಪ್ರವಚನ ನೀಡುತ್ತವೆ .ಶಾಂತಿ. ಸಮಾನತೆ. ಕರುಣೆ ಸೌಹಾರ್ದತೆಯ ಇವುಗಳೆಲ್ಲವೂ ಮಾನವೀಯತೆಯ ಮನುಷ್ಯತ್ವ ಗುಣವನ್ನು ಕಲಿಯಬೇಕಾದ ಸಿದ್ಧಾಂತಗಳು. ಎಲ್ಲಾ ಧರ್ಮಗಳು ಸಾಮರಸ್ಯ ಭಾವೈಕ್ಯತೆ ಸದ್ಭಾವನೆಯನ್ನು ಸಮಾಜದಲ್ಲಿ ಮತ್ತಷ್ಟು ಗಟ್ಟಿಗೊಳಿಸಲು ಸಲುವಾಗಿ ಮನುಕುಲದ ಮನುಷ್ಯತ್ವದಲ್ಲಿ ಅಳವಡಿಸಿಕೊಳ್ಳಬೇಕು ಆಗ ಮಾತ್ರ ವಿವಿಧತೆಯಲ್ಲಿ ಏಕತೆ ಹೊಂದಿದ ಭಾರತ ದೇಶದ ಪರಿಕಲ್ಪನೆ ಹೊಂದಲು ಸಾಧ್ಯವಾಗುತ್ತದೆ

ಮನುಕುಲದ ಒಳಿತಿಗಾಗಿ ಮನುಷ್ಯನ ಮನಸ್ಸು ಪರಿವರ್ತನೆ ಯಾಗಬೇಕು

ಕನ್ನಡಕ್ಕೆ ತನ್ನದೆಯಾದ ಸಾವಿರಾರು ಇತಿಹಾಸ ಪರಂಪರೆ ಇದೆ. ಈ ಸ್ಥಳದಲ್ಲಿ ಕುಮಾರವ್ಯಾಸ ಕವನ ಸಾಹಿತಿಗಳು ಕಲಾವಿದರು ಅನೇಕ ಮಹಾತ್ಮರ ಹುಟ್ಟಿದ ನಾಡು. ಹಾಗಾಗಿ ಕನ್ನಡ ನುಡಿಯರಿಮೆ ಕಲಿಕೆ ಎಂದು ಹೆಗ್ಗಳಿಕೆ ಹೆಸರಾಗಿದ್ದು ಕನ್ನಡ ನಾಡು ಮಾತೃ ಭಾಷೆಯನ್ನು ಪ್ರೀತಿಸೋಣ ವ್ಯಾವಹಾರಿಕ ಆಸಕ್ತಿ ಮೂಲಕ ಅನ್ಯ ಭಾಷೆ ಕಲಿಯೋಣ ಎಂದು ಹೇಳಿದರು

ಈ ಸಂದರ್ಭದಲ್ಲಿ. ಜೈನ ಮುನಿ ಆಚಾರ್ಯ ಭಗವಂತ, ಕುಂಥುನಾಥ ಜೈನ ಶ್ವೇತಾ ಂಬರ ಮೂರ್ತಿ ಪೂಜಕ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಲಾಲಚಂದ್ ಜೈನ್, ಜೈನ ಸಮಾಜದ ಮುಖಂಡರಾದ ಶ್ರೇಣಿಕರಾಜ್ ಚಾಜೆಡ್, ಸಂಜಯ್ ನಹ್ಹಾ,ಾ ಸುಜಿತ್ ಕುಮಾರ ಓಸ್ತವಾಲ್, ಗೌತಮ್ ಮೆಹ್ತಾ, ಮಹಾವೀರ ಚಂದ್ ಸಿ.ಎ, ಗೌತಮ್ ಚಾಜೇಡ್, ಮಹಾವೀರ

ಶೇ,ಾ ಅಶೋಕ ಬೋಹಾರ, ಸುರೇಶ ಶೇರ್ =ನೆ ಅ ಸೇರಿದಂತೆ ಜೈನ ಸಮಾಜದ ಸಾಮ ಇನ್ನು ಮುಖಂಡರು, ಮಹಿಳೆಯರು, ಯುವಕರು, ದಾನ ಯುವತಿಯರು, ಮಕ್ಕಳು ಭಾಗವಹಿಸಿದ್ದರು.

ಎಸ್ಎಸ್ಎಲ್ಸಿ ನಂತರ ಕಡಿಮೆ ಖರ್ಚಿನಲ್ಲಿ

ಡಿಪ್ಲೊಮಾ : ಕಲಿಕೆಯ ಜೊತೆಗೆ ಉದ್ಯೋಗದ ಗ್ಯಾರಂಟಿ

ಪ್ರಮುಖ ಸಂಸ್ಥೆಗಳಾಗಿವೆ. ಕಳೆದ 17 ವರ್ಷದಿಂದ ಶ್ರೀ ಸಂಜೀವ ಪಾಲಿಟೆಕ್ನಿಕ್ ಸಾವಿರಾರು ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದು, ಅದರ ಹಳೆಯ ವಿದ್ಯಾರ್ಥಿಗಳು ಸರ್ಕಾರಿ ಮತ್ತು ಖಾಸಗಿ ವಲಯದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಉತ್ತರ ಕರ್ನಾಟಕದಲ್ಲಿ ಮೈನಿಂಗ್ ಮತ್ತು ಮೈನ್ಸ್ ಸರ್ವೇ ಇಂಜಿನಿಯರಿಂಗ್‌ನಲ್ಲಿ ಈ ಕಾಲೇಜು ವಿಶೇಷ ಗುರುತು ಹೊಂದಿದೆ.

ಸಿಗುವ ಕೋರ್ಸ್‌ಗಳು ಹಾಗೂ ಸೌಲಭ್ಯಗಳು :

ಮೆಕ್ಯಾನಿಕಲ್, ಸಿವಿಲ್, , , ಮೈನಿಂಗ್ ಸೇರಿದಂತೆ ಹಲವು ವಿಭಾಗಗಳು ಲಭ್ಯ. ಸರ್ಕಾರಿ ನಿಯಮಾನುಸಾರ ಫೀಸ್ ರಿಯಾಯಿತಿ, ವಿದ್ಯಾರ್ಥಿವೇತನ, ಹಾಸ್ಟೆಲ್, ಕ್ಯಾಂಪಸ್ ನೇಮಕಾತಿ ಸೌಲಭ್ಯವಿದೆ.

ಹೊಸ -25 ಪಠ್ಯಕ್ರಮದಡಿ ಇಂಟರ್ನ್‌ಶಿಪ್ : ಕಡ್ಡಾಯವಾಗಿದ್ದು, ಓದಿನ ಜೊತೆಯಲ್ಲೇ ಉದ್ಯೋಗ ಕೌಶಲ್ಯ ಅಭಿವೃದ್ಧಿ ಆಗುತ್ತಿದೆ. ಇದರಿಂದ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸೆಲೆಕ್ಷನ್ ಸುಲಭವಾಗಿದೆ.

ಕಡಿಮೆ ಅವಧಿ, ಕಡಿಮೆ ವೆಚ್ಚ, ಹೆಚ್ಚಿನ ಉದ್ಯೋಗಾವಕಾಶ ಬಯಸುವ ವಿದ್ಯಾರ್ಥಿಗಳಿಗೆ ಡಿಪ್ಲೊಮಾ ಅತ್ಯುತ್ತಮ ಆಯ್ಕೆ ಎಂ.ಡಿ. ಜಾವೀದ್ ಹುಸೇನ್, ಪ್ರಾಚಾರ್ಯರುಶ್ರೀ ಸಂಜೀವ ಪಾಲಿಟೆಕ್ನಿಕ್ ಕಾಲೇಜ್ ಲಿಂಗಸುಗೂರು.

ಎಸ್.ಟಿ. 7% ಮೀಸಲಾತಿ ತಡೆಯಾಜ್ಞೆ ತೆರವುಗೊಳಿಸಲು ರಾಜ್ಯ ಸರ್ಕಾರ ಕ್ರಮವಹಿಸಲಿ: ಶ್ರೀರಾಮುಲು ಆಗ್ರಹ

ಆರೋಪಿಸಿದ ಅವರು, ಈ ತಡೆಯಾಜ್ಞೆ ತೆರವುಗೊಳಿಸುವುದಕ್ಕೆ ತಜ್ಞ ವಕೀಲರನ್ನು ನೇಮಿಸಬೇಕಿತ್ತು ಎಂದು ಹೇಳಿದರು.

ತಡೆಯಾಜ್ಞೆ ತೆರವುಗೊಳಿಸಿ ಕೇಂದ್ರಕ್ಕೆ ಸರ್ವಪಕ್ಷ ನಿಯೋಗಕ್ಕೆ ಕರೆದುಕೊಂಡು ಹೋಗಬೇಕೆಂದರು.

ಮಾಜಿ ಸಚಿವ ನರಸಿಂಹನಾಯಕ(ರಾಜುಗೌಡ) ಮಾತನಾಡಿ ಮೀಸಲಾತಿ ವಿಚಾರದಲ್ಲಿ ಜನರ ಮಧ್ಯೆ ಹೋರಾಟ, ಹಾಗೂ ನ್ಯಾಯಾಲಯದಲ್ಲಿ ಕಾನೂನು ಹೋರಾಟಕ್ಕೆ ಸಿದ್ಧರಾಗಿದ್ದೇವೆ. 56 % ಮೀಸಲಾತಿಗೆ ಬಿಜೆಪಿ ಸರಕಾರ ಮುಂದಾಗಿದ್ದೆ. ಎಸ್.ಟಿ.ಜನಾಂಗದ ಬಿಜೆಪಿ ಅಭ್ಯರ್ಥಿಗಳು ಸೋಲಬೇಕಾಗಿ ಬಂದಿತು. ಅದಕ್ಕೆ ನಮ್ಮ ವಿರುದ್ಧ ಮಾಡಿದ ಅಪಪ್ರಚಾರವೇ ಕಾರಣವಾಯಿತು. ಗೆದ್ದ ಅಭ್ಯರ್ಥಿಗಳು ಏನಾದರೂ ಮಾಡುತ್ತಾರೆ. ಈ ಬಗ್ಗೆ ಸದನದಲ್ಲಿ ಹಾಗೂ ಸರಕಾರದ ಮಟ್ಟದಲ್ಲಿ ಧ್ವನಿ ಎತ್ತುತ್ತಾರೆ ಎನ್ನುವ ನಿರೀಕ್ಷೆ ಹುಸಿಯಾಗಿದ್ದರಿಂದ ನಾವೀಗ ಒಂದೆಡೆ ಸೇರಿ ಮೊನ್ನೆ ಮೌರ್ಯ ಹೊಟೇಲ್ ನಲ್ಲಿ ಸಭೆ ಸೇರಿ ಎಲ್ಲರೂ ಒಗ್ಗೂಡಿ ಇದಕ್ಕೊಂದು ತಾರ್ಕಿಕ ಅಂತ್ಯ ಕಾಣಿಸಬೇಕೆಂದು ಯೋಚನೆ ಮಾಡಿದ್ದು ಇಂದು ರಾಯಚೂರಿನಲ್ಲಿ ಸಭೆ ಸೇರಿದ್ದೇವೆ. ಮುಂದಿನ ಹೋರಾಟ ರೂಪುರೇಷೆಗಳನ್ನು ರೂಪಿಸಲಾಗುತ್ತದೆ. ದಾವಣಗೆರೆ, ಬಳ್ಳಾರಿ, ಮೈಸೂರು ಹಾಗೂ ಬೆಳಗಾವಿಯಲ್ಲಿ ಸಭೆಗಳನ್ನು ಮಾಡಿ ಮುಂದಿನ ಹೋರಾಟಕ್ಕೆ ಅಣಿಯಾಗುತ್ತೇವೆ ಎಂದರು.

ಗೋಕಾಕ ಶಾಸಕ ಹಾಗೂ ಮಾಜಿ ಸಚಿವ ರಮೇಶ ಜಾರಕಿಹೊಳಿ, ಮಾಜಿ ಸಂಸದ ಬಿ.ವಿ.ನಾಯಕ, ಮಾಜಿ ಶಾಸಕರಾದ ಪ್ರತಾಪಗೌಡ ಪಾಟೀಲ, ಸೋಮಲಿಂಗಪ್ಪ, ಗಂಗಾಧರ ನಾಯಕ, ತಿಪ್ಪರಾಜು, ರಾಜೇಶ, ಮೈಸೂರು ಅಪ್ಪಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಲ್ಲತಾವರಗೇರಾ ಗ್ರಾಮ ಪಂಚಾಯತಿ ವತಿಯಿಂದ ಕಾರ್ಯಕ್ರಮ ಆಯೋಜನೆ

ಮಾಸಿಕ ಋತುಚಕ್ರ ವೇಳೆಯಲ್ಲಿ ವೈಯಕ್ತಿಕ ಶುಚಿತ್ವ ಮುಖ್ಯ: ಬಸಮ್ಮ ಹುಡೇದ ಸಲಹೆ



ಕೊಪ್ಪಳ,ಮೇ.31-

ಪ್ರತಿಯೊಬ್ಬ ಮಹಿಳೆ ಮಾಸಿಕ ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಿ ಸ್ಯಾನಿಟೇರಿ ಪ್ಯಾಡ್ ಬಳಕೆಗೆ ಒತ್ತು ನೀಡಬೇಕೆಂದು ಜಿಲ್ಲಾ ಪಂಚಾಯತಿಯ ಸ್ವಚ್ಛ ಭಾರತ ಮಿಷನ್ ಯೋಜನೆಯ ಸ್ಯಾನಿಟೇಷನ್ ಮತ್ತು ಹೈಜಿನ್ ಸಮಾಲೋಚಕಿ ಬಸಮ್ಮ ಹುಡೇದ ಅವರು ಸಲಹೆ ಮಾಡಿದರು.

ಕಲ್ಲತಾವರಗೇರಾ ಗ್ರಾಮ ಪಂಚಾಯತಿಯಿದ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕೆಂಚನಡೋಣಿ ತಾಂಡಾದ ಹತ್ತಿರ ಇರುವ ಡಿ ಹೊಸಳ್ಳಿ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಮಹಿಳೆಯರ ಸಮ್ಮುಖದಲ್ಲಿ ಮೇ 29ರಂದು ನಡೆದ ಋತುಚಕ್ರ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಟ್ಟಿನ ಸಮಯದಲ್ಲಿ ಮಾಸಿಕ ಋತುಚಕ್ರ ನಿರ್ವಹಣೆ, ಶುಚಿಯಾದ ಬಟ್ಟೆ ಬಳಕೆ ಹಾಗು ಸ್ಯಾನಿಟೆರಿ ಪ್ಯಾಡ್ ಬಳಕೆಯಿಂದ ಆಗುವ ಅನುಕೂಲಗಳು, ವೈಯಕ್ತಿಕ ಶುಚಿತ್ವ ಕುರಿತು ಎಲ್ಲರು ತಿಳಿಯಬೇಕು. ಮಹಿಳೆಯರು ವೈಯಕ್ತಿಕ ಶುಚಿತ್ವದ ಬಗ್ಗೆ ಹೆಚ್ಚಿನ ಒತ್ತು ಕೊಡಬೇಕು. ಸ್ಯಾನಿಟರಿ ಪ್ಯಾಡಗಳ ಬಳಕೆ ಹಾಗೂ ಬಳಸಿದ ಪ್ಯಾಡ್‌ಗಳನ್ನು ಇನ್ಸಿ ನರೇಟರ್ ಮೂಲಕ ವೈಜ್ಞಾನಿಕ ನಿರ್ವಹಣೆಯ ಬಗ್ಗೆ ತಿಳಿದುಕೊಳ್ಳಬೇಕು ಎಂದು ಸಲಹೆ ಮಾಡಿದರು.

ಇತ್ತೀಚಿನ ದಿನಗಳಲ್ಲಿ ನಾವು ಆರೋಗ್ಯದ ಬಗ್ಗೆ ಕಾಳಜಿ ವಹಿಸದೇ ಇರುವುದರಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದೇವೆ. ಮುಟ್ಟನ್ನು ಗುಟ್ಟನಾಗಿಡಬೇಕು ಎಂಬ ಭ್ರಮೆಯಿಂದ ಹೊರಬರಬೇಕು. ಆರೋಗ್ಯದ ಬದಲಾವಣೆಗೆ ಮುನ್ನುಡಿ ಬರೆಯಬೇಕು. ಮಹಿಳೆಯರು ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಲು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬಳಕೆಯಾದ ಪ್ಯಾಡಗಳನ್ನು ಸಂಗ್ರಹಿಸಿ ವೈಜ್ಞಾನಿಕ ನಿರ್ವಹಣೆ ಮಾಡಲು ಇನ್ಸಿ ನರೇಟರ್ ಅಳವಡಿಸಲಾಗುತ್ತಿದ್ದು ಎಲ್ಲಾ ಮಹಿಳೆಯರು ಅವುಗಳಿಗೆ ನೀಡಬೇಕು. ಎಲ್ಲಿ ಬೇಕಾದಲ್ಲಿ ಬಿಸಾಡದೇ ಗ್ರಾಮ ಪಂಚಾಯತಿ ವಾಹನಕ್ಕೆ ನೀಡಬೇಕು ಅಥವಾ ನಿಗದಿಪಡಿಸಿದ ಸ್ಥಳದಲ್ಲಿ ಅವುಗಳನ್ನು ವಿಲೇವಾರಿ ಮಾಡತಕ್ಕದ್ದು ಎಂದು ಅವರು ಸಲಹೆ ಮಾಡಿದರು.

ಬಯಲು ಶೌಚಕ್ಕೆ ಹೋಗುವುದರಿಂದ ಅನೇಕ ರೋಗಗಳು ಹರಡುವ ಸಾಧ್ಯತೆಯು ಶೇ.80ರಷ್ಟು ಇರುತ್ತದೆ ಎಂಬ ಬಗ್ಗೆ ತಿಳಿಯಬೇಕು. ಹಸಿ ಕಸ ಮತ್ತು ಒಣ ಕಸ ಪ್ರತ್ಯೇಕಿಸಿ ವಾಹನಕ್ಕೆ ನೀಡಬೇಕೆಂದು ಸಲಹೆ ಮಾಡಿದರು.

ತಾಲೂಕು ಪಂಚಾಯತಿಯ ನರೇಗಾ ಸಹಾಯಕ ನಿರ್ದೇಶಕಿ ಸೌಮ್ಯ ಕೆ ಅವರು ಮಾತನಾಡಿ, ಎಲ್ಲಾ ಕೂಲಿಕಾರರು ತಮ್ಮ ಕೆಲಸದ ಜೊತೆಗೆ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ನೆಮ್ಮದಿ ಜೀವನ ಸಾಗಿಸಬೇಕೆಂದು ತಿಳಿಸಿದರು.

ಕೆಲಸದ ಒತ್ತಡದಲ್ಲಿ ನಾವುಗಳು ಆರೋಗ್ಯದ ಬಗ್ಗೆ ಗಮನ ಹರಿಸದಿರುವ ದರಿಂದ ದೇಹದ ಆರೋಗ್ಯದಲ್ಲಿ ಏರುಪೇರು ಗಳು ಆಗುತ್ತವೆ. ಕಾಲಕಾಲಕ್ಕೆ ನಾವುಗಳು ವೈದ್ಯರನ್ನು ಸಂಪರ್ಕಿಸಿ ತಪಾಸಣೆ ಮಾಡಿಸಿಕೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಎಲ್ಲರೂ ಒತ್ತಡಕ್ಕೆ ಒಳಗಾಗಿ ನಮ್ಮ ದೇಹದ ಆರೋಗ್ಯದಲ್ಲಿ ಏರುಪೇರಾಗುವುದನ್ನು ಕಾಣುತ್ತಿದ್ದೇವೆ. ಆ ದಿಸೆಯಲ್ಲಿ ಕ್ರಮಬದ್ಧ ವಾದ ಆಹಾರ, ಆರೋಗ್ಯ ಕಾಳಜಿಯೊಂದಿಗೆ ಕೆಲಸ ನಿರ್ವಹಿಸುವುದರಿಂದ ದೇಹದ ಮೇಲೆ ಯಾವುದೇ ವ್ಯತಿರಿಕ್ತ ಪರಿಣಾಮ ಉಂಟಾಗು ವದಿಲ್ಲ ಎಂದು ಸಲಹೆ ಮಾಡಿದರು.

ತಾಲೂಕು ಐಇಸಿ ಸಂಯೋಜಕ ದೇವರಾಜ ಪತ್ತಾರ, ಬೇರ್ಫೂಟ್ ಟೆಕ್ನಿಷಿಯನ್ ರಾಮಣ್ಣ ಕುಟುಗನಹಳ್ಳಿ, ಡಿಇಒ ಲಕ್ಷ್ಮಣ ಹಿರೇಮನಿ, ಗ್ರಾಮ ಕಾಯಕ ಮಿತ್ರ ಯಂಕಮ್ಮ, ತಾಂಡಾ ರೋಜಗಾರ್ ಮಿತ್ರ ಶೇಖಪ್ಪ ಕಾರಬಾರಿ, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಪ್ರಭು ಚವ್ಹಾಣ ಚಾಲನೆ

ಕಾಮಗಾರಿ ಕಳಪೆಯಾದರೆ ಶಿಸ್ತು ಕ್ರಮ-ಚೌವ್ಹಾಣ



ಔರಾದ್,ಮೇ.31-

ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಶನಿವಾರ ಇಟಗ್ಯಾಳ, ಮುತಖೇಡ, ಅಕನಾಪೂರ ಹಾಗೂ ಚಿಕ್ಲಿ.ಯು ಗ್ರಾಮಗಳಲ್ಲಿ ಸಂಚರಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಇಟ್ಯಾಳನಲ್ಲಿ ಇಟಗ್ಯಾಳನಿಂದ ಮಾನೂರ(ಕೆ) ವರೆಗೆ 170 ಲಕ್ಷ ಮೊತ್ತದ ಹೊಸ ರಸ್ತೆ ನಿರ್ಮಾಣ, ಮುತಖೇಡ್‌ನಲ್ಲಿ 25 ಲಕ್ಷ ಮೊತ್ತ ಬ್ರಿಜ್ ಕಂ ಬ್ಯಾರೇಜ್ ದುರಸ್ತಿ ಹಾಗೂ ಅಕನಾಪೂರನಲ್ಲಿ 45 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆ ದುರಸ್ತಿ, ಚಿಕ್ಲಿ(ಯು)ನಲ್ಲಿ 20 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆಯ ದುರಸ್ತಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿವಿಧ ಕಾಮಗಾರಿಗಳ ಕುರಿತು ಅಧಿಕಾರಿ ಗಳೊಂದಿಗೆ ಸಮಾಲೋಚನೆ ನಡೆಸಿದ ಶಾಸಕರು, ಕಾಮಗಾರಿ ಗಳನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣ ಗೊಳಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಗ್ರಾಮ ಸಂಚಾರದ ಸಂದರ್ಭದಲ್ಲಿ ಸಾರ್ವಜನಿಕರಿಂದ ಬಂದ ಬೇಡಿಕೆಗಳಿಗೆ ಸ್ಪಂದಿಸಿ ಅಗತ್ಯ ಅನುದಾನವನ್ನು ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಕ್ಷೇತ್ರದ ಸಮಗ್ರ ಅಭಿವೃದ್ಧಿಯೇ ತಮ್ಮ ಮುಖ್ಯ ಗುರಿಯಾಗಿದ್ದು, ಜನರ ನಿರೀಕ್ಷೆಗೆ ತಕ್ಕಂತೆ ಮೂಲಸೌಕರ್ಯಗಳನ್ನು ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾಮಗಾರಿಗಳ ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ನಿರ್ಮಾಣ ಕಾರ್ಯಗಳಲ್ಲಿ ಲೋಪಗಳು ಕಂಡುಬಂದಲ್ಲಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಗುಣಮಟ್ಟದಲ್ಲಿ ನಿರ್ಲಕ್ಷ್ಯ ತೋರಿದವರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಹಾಗಾಗಿ ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದು ಹೇಳಿದರು.

ಇದೇ ವೇಳೆ ಚಿಂತಾಕಿ, ವಡಗಾಂವ ಹಾಗೂ ಚಿಕ್ಲಿ.ಯು ಗ್ರಾಮಗಳಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ವಿತರಿಸುವ ಮೂಲಕ ಉತ್ತಮ ಬೆಳೆ ಉತ್ಪಾದನೆಗೆ ಸಹಕಾರಿಯಾಗುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮೇ.29 ರಂದು ತಾಣಾ ಕುಶನೂರನಲ್ಲಿ ತಾಣಾ ಕುಶನೂರನಿಂದ ನಿಡೋದಾವರೆಗೆ 86.40 ಲಕ್ಷ ಮೊತ್ತದ ರಸ್ತೆ, 30 ಲಕ್ಷದ ಸಮುದಾಯ ಭವನದ ಉಳಿದ ಕಾಮಗಾರಿ, ಚಟ್ನಾಳನಲ್ಲಿ ಚಟ್ನಾಳನಿಂದ ಚಂದರಮಹಾರಾಜ ತಾಂಡಾವರೆಗೆ 155.80 ಲಕ್ಷದ ರಸ್ತೆ, ಜೀರ್ಗಾ(ಕೆ)ನಿಂದ ಜೋಜನಾವರೆಗೆ 198.05 ಲಕ್ಷ ಮೊತ್ತದ ರಸ್ತೆ, ಬಾಚೇಪಳ್ಳಿಯಿಂದ ಬಾಚೇಪಳ್ಳಿ ಕ್ರಾಸ್‌ವರೆಗೆ 101.60 ಲಕ್ಷದ ರಸ್ತೆ, ಮುಂಗನಾಳನಲ್ಲಿ 206.55 ಮೊತ್ತದ ರಸ್ತೆ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸತೀಷ ಪಾಟೀಲ, ಸಚಿನ ರಾಠೋಡ, ಖಂಡೋಬಾ ಕಂಗಟೆ ಪ್ರಕಾಶ ಜೀರ್ಗೆ, ಮಲ್ಲಪ್ಪ ನೇಳಗೆ, ಪ್ರಕಾಶ ಮೇತ್ರೆ, ಬಾಲಾಜಿ ಪಾಟೀಲ, ಸೋಮನಾಥ ಆಲೂರ, ಸಂಗು ಬೋರ್ಗಿ, ಹಣಮಂತ ನೇಳಗೆ, ರವೀಂದ್ರ ರೆಡ್ಡಿ, ಜಗದೀಶ ಪಾಟೀಲ, ಈರಾರೆಡ್ಡಿ, ಶರಣು ಪಾಟೀಲ, ಅನೀಲ ನಾರಾಯಣಪೂರ, ಪ್ರಕಾಶ ಬೀರಕೂರೆ, ನಾಗಶೆಟ್ಟಿ ಗಾದಗೆ, ಗೋವಿಂದ ರೆಡ್ಡಿ, ಶರಣಪ್ಪ ಇಟಗಾ, ಧಾರಾಸಿಂಗ ರಾಠೋಡ, ಶಂಕರ, ನರಸಿಂಗ್ ಪಾಟೀಲ ಸೇರಿದಂತೆ ವಿವಿಧ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಎಸ್ ಐಆರ್ ಮೂಲಕ ಜನರ ಹಕ್ಕು ಕಸಿಯುತ್ತಿರುವ ಕೇಂದ್ರ ಸರಕಾರ: ಭೀಮರಾವ್? ಟಿ.ಟಿ ಆರೋಪ

ಕಲಬುರಗಿ,ಮೇ.30-

ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಹೆಸರಿನಲ್ಲಿ ದೇಶವ್ಯಾಪಿ ಕೋಟ್ಯಂತರ ಜನರ ಮತದಾನದ ಹಕ್ಕನ್ನು ಕಸಿಯಲು ಕೇಂದ್ರ ಸರಕಾರ ಹಾಗೂ ಚುನಾವಣಾ ಆಯೋಗ ಹೊರಟಿವೆ ಎಂದು ಎಸ್.ಐ.ಆರ್ ವಿರೋಧಿ ಕರ್ನಾಟಕ, ಎಸ್. ಐಆರ್ ವಿರೋಧಿ ಜಾತ್ಯತೀತ ಪಕ್ಷಗಳುಜನಪರ ಸಂಘಟನೆಗಳ ಒಕ್ಕೂಟ ಕರ್ನಾಟಕದ ಮುಖಂಡ ಭೀಮರಾವ್? ಟಿ.ಟಿ. ಅವರು ಗಂಭೀರ ಆರೋಪ ಮಾಡಿದರು.

ನಗರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈಗ ಕೊಟ್ಟಿರುವ ನಿರ್ದಿಷ್ಟ ಸಮಯದಲ್ಲಿ ಇದನ್ನು ಮಾಡಲು ಆಗುವುದಿಲ್ಲ, ಬದಲಾಗಿ ಐದಾರು ತಿಂಗಳು ಸಮಯ ಕೊಡಬೇಕು ಎಂದು ಆಗ್ರಹಿಸಿದರು.

ಈಗಾಗಲೇ 13 ರಾಜ್ಯಗಳಲ್ಲಿ ಎಸ್.ಐಆರ್ ನಡೆಸಿ 6.5 ಕೋಟಿ ಜನರನ್ನು ಮತದಾರರ ಪಟ್ಟಿಯಿಂದ ಹೊರಹಾಕಲಾಗಿದೆ. ಇದರಲ್ಲಿ ಕನಿಷ್ಠ 5 ಕೋಟಿ ಅರ್ಹ ಮತದಾರರು ಎಂದು ತಿಳಿಸಿದರು.

ಈ ವೇಳೆ ಮಹಾಂತಪ್ಪ ಸಂಗಾವಿ, ಸಲೀಂ ಅಹ್ಮದ್?, ಲಕ್ಷ್ಮಣ ಮಂಡಲಗೇರಾ, ರೇಣುಕಾ ಸಿಂಗೆ, ಬಾಲಾಜಿ ಕಾಂಬಳೆ, ಮೈಲಾರಿ ದೊಡ್ಡನಿ ಶೇಖರಸಿಂಗ್? ಇತರರು ಉಪಸ್ಥಿತರಿದ್ದರು.

ಕುರೇಕುಪ್ಪ ಪುರಸಭೆಯಿಂದ ಲ್ಯಾಪ್‌ಟಾಪ್ ಹಾಗೂ ಸಾಧನ ಸಲಕರಣೆಗಳಿಗೆ ಅರ್ಜಿ ಆಹ್ವಾನ

ಬಳ್ಳಾರಿ,ಮೇ 31

ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿರುವ ಅರ್ಹ ಫಲಾನುಭವಿಗಳಿಗೆ 2026-27ನೇ ಸಾಲಿನ ಎಸ್.ಎಫ್.ಸಿ ಯೋಜನೆಯಡಿ ವಿವಿಧ ಸೌಲಭ್ಯಗಳನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪುರಸಭೆ ವತಿಯಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಹಾಗೂ ವಿಶೇಷ ಚೇತನರಿಗೆ ಸಾಧನ ಸಲಕರಣೆಗಳನ್ನು ಪಡೆಯಲು ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಅರ್ಹ ಫಲಾನುಭವಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಜೂನ್ 16ರ ಒಳಗೆ ಕುರೇಕುಪ್ಪ ಪುರಸಭೆ ಕಚೇರಿಗೆ ಸಲ್ಲಿಸಬೇಕಾಗಿದೆ. ನಿಗದಿತ ಅವಧಿಯ ನಂತರ ಬರುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.

★ಅಗತ್ಯವಿರುವ ದಾಖಲೆಗಳು:★

ಅರ್ಜಿಯೊಂದಿಗೆ ಆಧಾರ್ ಕಾರ್ಡ್, ವೋಟರ್ ಐಡಿ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವಚಿತ್ರ, ಹಿಂದಿನ ವರ್ಷದ ಅಂಕಪಟ್ಟಿ, ಕಾಲೇಜಿನ ಐಡಿ ಕಾರ್ಡ್, ಕಾಲೇಜಿನ ವ್ಯಾಸಂಗ ಪ್ರಮಾಣ ಪತ್ರ, ವಿಶೇಷ ಚೇತನರಿಗೆ ಯುಡಿಐಡಿ ಕಾರ್ಡ್ ದಾಖಲೆಗಳ ನಕಲು ಪ್ರತಿಗಳನ್ನು (ಅಟೆಸ್ಟೆಡ್)ಲಗತ್ತಿಸಬೇಕಾಗಿರುತ್ತದೆ.



ಕೃಷಿ ಮಳಿಗೆಗಳ ಮೇಲೆ ಕೃಷಿ ಇಲಾಖೆ ಅಧಿಕಾರಿಗಳ ಅನಿರೀಕ್ಷಿತ ದಾಳಿ

ನಿಯಮ ಉಲ್ಲಂಘಿಸಿದ ಮಾರಾಟಗಾರರಿಗೆ ನೋಟಿಸ್ ಜಾರಿ

ಕಲಬುರಗಿ, ಮೇ,31-

ರೈತರಿಗೆ ಯಾವುದೇ ಕಾರಣಕ್ಕೂ ರಸಗೊಬ್ಬರವನ್ನು ನಿಗದಿಗಿಂತ ಬೆಲೆಗೆ ಮಾರಾಟ ಮಾಡಬೇಕು ಅನಾವಶ್ಯಕವಾಗಿ ರೈತರಿಂದ ಹೆಚ್ಚಿನ ಹಣ ವಸೂಲಿ ಮಾಡುವವರ ವಿರುದ್ಧ ರಸಗೊಬ್ಬರ ನಿಯಂತ್ರಣ ಆದೇಶ ಹಾಗೂ ಅವಶ್ಯಕ ವಸ್ತುಗಳ ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್ ಅವರು ಮಾರಾಟಗಾರರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಶುಕ್ರವಾರದಂದು ಕಲಬುರಗಿ ಜಿಲ್ಲೆಯ ಜೇವರ್ಗಿ, ಯಡ್ರಾಮಿ, ಚಿತ್ತಾಪುರ ಹಾಗೂ ಸೇಡಂ ತಾಲ್ಲೂಕುಗಳ ಕೃಷಿ ಪರಿಕರ ಮಾರಾಟಗಾರರ ಅಂಗಡಿಗಳ ಮೇಲೆ ಜಂಟಿ ಕೃಷಿ ನಿರ್ದೇಶಕರ ನೇತೃತ್ವದ ಅಧಿಕಾರಿಗಳ ತಂಡವು ಅನಿರೀಕ್ಷಿತ ದಾಳಿ ನಡೆಸಿ, ತಪಾಸಣೆ ಕೈಗೊಂಡು K-KISAN ತಂತ್ರಾಂಶದಲ್ಲಿ ರಸಗೊಬ್ಬರ ವಿತರಿಸುತ್ತಿರುವ ಕುರಿತು ಹಾಗೂ ರಸಗೊಬ್ಬರದ ದಾಸ್ತಾನಿನ ವಿವರ ಹಾಗೂ POS ದಾಸ್ತಾನನ್ನು ಪರಿಶೀಲಿಸಿದರು.

ರೈತರಿಗೆ ನಿಗದಿಗಿಂತ ಹೆಚ್ಚಿನ ಬೆಲೆಯಲ್ಲಿ ರಸಗೊಬ್ಬರ ಮಾರಾಟ ಮಾಡುತ್ತಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ, ತಪ್ಪಿತಸ್ಥ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಜರುಗಿಸಲು ಈ ಜಂಟಿ ದಾಳಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಮಾರ್ಕೆಟನಲ್ಲಿರುವ ಗೋದಾಮುಗಳಿಗೆ ಬೇಟಿ ನೀಡಿ FCO-1985 (Fertilizer Control Order) ಉಲ್ಲಂಘಿಸಿದ ಮಾರಾಟಗಾರರಿಗೆ ನೋಟ್? ನೀಡಲಾಗಿದ್ದು, ಅವರ ಮಾರಾಟ ಪರವಾನಿಗೆ ಮೇಲೆ ಮುಂದಿನ ದಿವಸಗಳಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಪರಿಕರ ಮಾರಾಟಗಾರರು ತೆಗೆದುಕೊಂಡ ಕ್ರಮಗಳು:- ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕಿನ ಕೃಷಿ ಪರಿಕರ ಮಾರಾಟಗಾರರ ಮೇಲೆ ತೆಗೆದುಕೊಂಡ ಕ್ರಮಗಳ ಮಾಹಿತಿ ಪಡೆದುಕೊಂಡರು. ಜೇವರ್ಗಿ, ಯಡ್ರಾಮಿ, ಸೇಡಂ, ಚಿತ್ತಾಪೂರ ಸೇರಿದಂತೆ ಒಟ್ಟು 28 ಮಳಿಗೆಗಳನ್ನು ಪರಿಶೀಲಿಸಿದರು. ಒಟ್ಟು 26 ಮಳಿಗೆಗಳಿಗೆ ಷೋಕಾಸ್ ನೋಟಿಸ್ ಜಾರಿ ಮಾಡಿದರು. ಮಾರಾಟ ತಡೆ ಆದೇಶದ ಮಳಿಗೆಗಳ ಸಂಖ್ಯೆ 10, ಪ್ರಮಾಣ (ಟನ್‌ಗಳಲ್ಲಿ) ಜೇವರ್ಗಿ 192.4 ಒಟ್ಟು ಮೊತ್ತ ರೂ. 45.75 ರೂ. ಲಕ್ಷಗಳು.

ಈ ಅನಿರೀಕ್ಷಿತ ದಾಳಿಯ ತಂಡದಲ್ಲಿ ಕಲಬುರಗಿ ಉಪ ಕೃಷಿ ನಿರ್ದೇಶಕರಾದ ಡಾ. ಬಾಲರಾಜ್ ಗಂಗರಾವ್, ಸೇಡಂ ಉಪ ಕೃಷಿ ನಿರ್ದೇಶಕರಾದ ಅನಸೂಯಾ ಹೂಗಾರ, ಜಾರಿದಳದ ಸಹಾಯಕ ಕೃಷಿ ನಿರ್ದೇಶಕರು, ಸಂಬಂಧಪಟ್ಟ ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರು ಹಾಗೂ ಕೃಷಿ ಅಧಿಕಾರಿಗಳು ಉಪಸ್ಥಿತರಿದ್ದರು.

ಕೆಜಿಗೆ 2.5 ಲಕ್ಷ ರೂಪಾಯಿಗೂ ಹೆಚ್ಚು ಬೆಲೆಯ ವಿದೇಶಿ ತಳಿಯ ಮಾವು ಬೆಳೆದ ಆಯುರ್ವೇದ ವೈದ್ಯ

ನಿರ್ಮಲ್ (ತೆಲಂಗಾಣ):

ಕೆಲವು ಮಾವಿನ ತಳಿಗಳು ನಮ್ಮ ಸ್ಥಳೀಯ ಹವಾಮಾನ ಪರಿಸ್ಥಿತಿಗಳಲ್ಲಿ ಬೆಳೆಯೋದಿಲ್ಲ. ಅವುಗಳಲ್ಲಿ ಜಪಾನ್‌ನ ಮಿಯಾಝಾಕಿ ತಳಿಯೂ ಒಂದು. ಶೀತ ಪ್ರದೇಶದಲ್ಲಿ ಮಾತ್ರ ಬೆಳೆಯುವಂತಹ ಮಿಯಾಝಾಕಿ ಮಾವಿನ ಹಣ್ಣನ್ನು ತೆಲಂಗಾಣದ ಆಯುರ್ವೇದ ವೈದ್ಯರೊಬ್ಬರು ಬೆಳೆದು, ಫಲ ಪಡೆದಿದ್ದಾರೆ.

ನಿರ್ಮಲ್ ಜಿಲ್ಲೆಯ ಕಡೆಮ್ ಮಂಡಲದ ನವಾಬ್ ಪೇಟಾ ಗ್ರಾಮದಲ್ಲಿ ಆಯುರ್ವೇದ ವೈದ್ಯ ಡಾ. ರಾಪಳ್ಳಿ ಸತ್ಯಂ ಅವರು ಜಪಾನ್‌ನ ಮಿಯಾಝಾಕಿ ಮಾವಿನ ತಳಿ ಬೆಳದು ಯಶಸ್ವಿಯಾಗಿದ್ದಾರೆ. ಡಾ. ರಾಪಳ್ಳಿ ಸತ್ಯಂ ಅವರು, ಆರು ಗಿಡಗಳನ್ನು ತಂದು ನೆಟ್ಟಿದ್ದರು. ಅವುಗಳಲ್ಲಿ ಒಂದು ಗಿಡ ಸತ್ತು ಹೋಯಿತು. ಉಳಿದ ಐದು ಗಿಡಗಳು ಕೇವಲ ಎರಡೂವರೆ ವರ್ಷಗಳಲ್ಲಿ ಹುಲುಸಾಗಿ ಬೆಳೆದು, ಫಲ ನೀಡಿವೆ.

ಸತ್ಯಂ ಅವರು ಮೂರು ವರ್ಷಗಳ ಹಿಂದೆ ಕೇರಳದ ಒಂದು ಸಂಸ್ಥೆಯ ಮೂಲಕ ಪ್ರತಿ ಗಿಡಕ್ಕೆ 10,000 ರೂ. ಕೊಟ್ಟು ತಂದು ನೆಟ್ಟಿದ್ದಾರೆ. ಆಯುರ್ವೇದ ವೈದ್ಯರಾಗಿರುವ ಅವರು, ನವಬುಪೇಟೆಯಲ್ಲಿರುವ ತಮ್ಮ ಸತ್ಯಂ ಸಾಂಪ್ರದಾಯಿಕ ಆಯುರ್ವೇದ ಆಶ್ರಮದ ಆವರಣದಲ್ಲಿ ವಿವಿಧ ರೀತಿಯ ಸಸ್ಯಗಳನ್ನು ಬೆಳೆಸುತ್ತಾರೆ. ಈ ರೀತಿಯಾಗಿ, ಈ ಪ್ರದೇಶದಲ್ಲಿ ಬೆಳೆಯುವುದು ಅಸಾಧ್ಯ ಎಂದು ಭಾವಿಸಲಾಗಿದ್ದ ಮಾವಿನ ತಳಿಗಳ ಗಿಡಗಳನ್ನು ತಂದು ಬೆಳೆಸುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ಈ ಮಿಯಾಝಾಕಿ ಮಾವಿನ ಹಣ್ಣಿನ ಬೆಲೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರತಿ ಕೆಜಿಗೆ 2.5 ಲಕ್ಷ ರೂ.ಗಳಿಂದ 2.8 ಲಕ್ಷ ರೂ.ಗಳವರೆಗೆ ಇದೆ.

ಸತ್ಯಂ ಅವರು ಇತ್ತೀಚೆಗೆ ಸ್ಥಳೀಯ ಶಾಸಕ ಬೊಜ್ಜು ಪಟೇಲ್ ಅವರನ್ನು ಭೇಟಿಯಾಗಿ ಈ ಭಾರಿ ಬೆಲೆಯ ಮಾವಿನ ಹಣ್ಣಿನ ಮೌಲ್ಯವನ್ನು ವಿವರಿಸಿದ್ದಾರೆ. ಜೊತೆಗೆ ಅವರಿಗೆ ಕೆಲವು ಹಣ್ಣುಗಳನ್ನೂ ನೀಡಿದ್ದಾರೆ.

ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ: ಜಾಗೃತಿ ಕಾರ್ಯಕ್ರಮ



ಕೊಪ್ಪಳ ಮೇ 31-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಬೋಧಕ ಆಸ್ಪತ್ರೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಹಾಗೂ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜ್ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಮೇ 29ರಂದು ಕಾಲೇಜಿನ ಸಭಾ ಭವನದಲ್ಲಿ ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ. ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಮೇ 28 ರಂದು ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಎಲ್ಲರೂ ಒಟ್ಟಾಗಿ, ಮುಟ್ಟಿನ ಸ್ನೇಹಿಯಾದ ಜಗತ್ತನ್ನು ನಿರ್ಮಿಸೋಣ ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ವಿಜ್ಞಾನ ತಂತ್ರಜ್ಞಾನ ವಿಷಯದಲ್ಲಿ ಜಗತ್ತು ಅಭಿವೃದ್ಧಿ ಕಂಡರೂ ಮಹಿಳೆಯರ ನೈಸರ್ಗಿಕವಾದ ಋತುಚಕ್ರದ ಕಾಳಜಿ ಶುಚಿತ್ವದ ಬಗ್ಗೆ ಅರಿವಿನ ಕೊರತೆ ಹೊಂದಿದೆ ಎಂದರು.

ತಂತ್ರಜ್ಞಾನದಲ್ಲಿ ದಾಪೂಗಾಲು ಇಡುತ್ತಿರುವ ನಾವು ಇಂದಿಗೂ ಮಹಿಳೆಯರ ಋತುಚಕ್ರದ ಕಟ್ಟುಪಾಡಿಗೆ ಒಳಗಾಗಿದ್ದೇವೆ. ಈ ಬಗ್ಗೆ ಇಂದಿಗೂ ಇದನ್ನು ದೇಹದ ನೈಸರ್ಗಿಕ ಚಟುವಟಿಕೆ ಎಂಬುದನ್ನು ಮರೆತು ಕಳಂಕ ಎಂಬ ರೀತಿಯಲ್ಲಿ ಕಾಣುತ್ತಿದ್ದೇವೆ. ರಾಷ್ಟ್ರಗಳು ಸಾಂಪ್ರದಾಯಿಕ ಮನಸ್ಥಿತಿ ಹೊಂದಿರುವ ಪುರುಷ ಮತ್ತು ಮಹಿಳೆಯರಿಗೆ ಈ ವಿಚಾರ ಕುರಿತು ಸಾರ್ವಜನಿಕವಾಗಿ ಮಾತನಾಡುವುದು ದೊಡ್ಡ ಕಷ್ಟವಾಗಿದೆ. ಜನರಿಗೆ ಈ ಋತುಚಕ್ರದ ವಿಚಾರ ಕುರಿತು ಸರಿಯಾದ ಮಾಹಿತಿ ಮತ್ತು ಅರಿವು ಮೂಡಿಸುವ ಪ್ರಯತ್ನವಾಗಬೇಕಾಗಿದೆ. ವಿಶ್ವ ಋತುಚಕ್ರದ ನೈರ್ಮಲ್ಯದ ದಿನದ ಮೂಲಕ ಮಹಿಳೆಯರು ಮತ್ತು ಯುವತಿಯರಿಗೆ ಋತುಚಕ್ರದ ನೈರ್ಮಲ್ಯ ಮತ್ತು ಸುರಕ್ಷತೆ ಬಗ್ಗೆ ತಿಳಿ ಹೇಳುವ ಪ್ರಯತ್ನ ನಡೆಸಲಾಗುವುದು. ಈ ವಿಶ್ವ ಋತುಚಕ್ರ ನೈರ್ಮಲ್ಯ ದಿನವನ್ನು 2030ರ ವೇಳೆಗೆ ಋತುಚಕ್ರವು ಜೀವನದ ಸಾಮಾನ್ಯ ಸಂಗತಿಯನ್ನಾಗಿ ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು ಮತ್ತು ಪೌಷ್ಠಿಕ ಆಹಾರದಲ್ಲಿ ಹದಿ-ಹರೆಯದವರು ಪೌಷ್ಠಿಕ ಆಹಾರ ಸೇವನೆ ಕುರಿತು ವಿವರವಾಗಿ ಮಾತನಾಡಿದರು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಋತುಚಕ್ರದ ಮಹತ್ವದ ಪಂಚಸೂತ್ರಗಳು, ತ್ಯಾಜ್ಯ ವಿಲೇವಾರಿ ಹಾಗೂ ಪ್ರಮುಖ ಅಂಶಗಳ ಕುರಿತು ವಿವರವಾಗಿ ಮಾತನಾಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿ ಕಾರಿಗಳಾದ ಕೆ.ಗಂಗಮ್ಮ ಅವರು ಸ್ಯಾನಿಟರಿ ಪ್ಯಾಡ ಬಳಕೆ, ಪೌಷ್ಠಿಕ ಆಹಾರ, ಮುಟ್ಟಿನ ಮೈತ್ರಿ ಕಪ್ ಬಳಸುವ ಬಗ್ಗೆ, ವೈಯಕ್ತಿಕ ಸ್ವಚ್ಛತೆ ಹಾಗೂ ಮುಟ್ಟಿನ ಬಗ್ಗೆ ಇರುವ ಮೂಢನಂಬಿಕೆಗಳನ್ನು ಹೋಗಲಾಡಿಸುವ ಕುರಿತು, ಹೆಚ್.ಪಿ.ಸಿ ಲಸಿಕೆ, ಹಾವು ಕಡಿತ ನಿಯಂತ್ರಣ ಕಾರ್ಯಕ್ರಮ ಮತ್ತು ರಾಷ್ಟ್ರೀಯ ರೇಬೀಸ್ ನಿಯಂತ್ರಣ ಕಾರ್ಯ ಕ್ರಮ ಕುರಿತು ವಿವರವಾಗಿ ಮಾತ ನಾಡಿದರು. ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾ ಲರಾದ ಎ.ಆರ್ ಶಿವಾನಂದ ಅವರು ತಮ್ಮ ಅಧ್ಯಕ್ಷರ ಭಾಷಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಇಂದಿನ ವಿದ್ಯಾರ್ಥಿಗಳಿಗೆ ಬಹಳ ಪ್ರಯೋಜ ನಕಾರಿ ಮತ್ತು ಅವಶ್ಯಕತೆಯಾಗಿದೆ. ಈ ಕಾರ್ಯಕ್ರಮವನ್ನು ವಿದ್ಯಾ ರ್ಥಿಗಳು ಸದುಪಯೋಗ ಪಡೆದು ಕೊಂಡು ತಮ್ಮ ತಮ್ಮ ಗ್ರಾಮ ಗಳಲ್ಲಿ, ವಾರ್ಡ್‌ಗಳಲ್ಲಿ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು. ಕೊನೆಯಲ್ಲಿ ಋತುಚಕ್ರ ಕಾರ್ಯಕ್ರಮ ಕುರಿತು ಪ್ರತಿಜ್ಞಾವಿಧಿ ಭೋದಿಸಲಾಯಿತು. ಆರ್.ಕೆ.ಎಸ್.ಕೆ ಜಿಲ್ಲಾ ಸಂಯೋಜಕರಾದ ಮೆಹಬೂಬಸಾಬ ಇಲಾಹಿ ಅವರು ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಭೋದಕ ಆಸ್ಪತ್ರೆಯ ಆರ್.ಕೆ.ಎಸ್.ಕೆ ಆಪ್ತ ಸಮಾಲೋಚಕರಾದ ಸ್ವರೂಪರಾಣಿ ಅವರು ವಂದನಾರ್ಪಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು ಹಾಗೂ ಇತರೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.



ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ : 322 ಚೀಲ ಅಕ್ಕಿ ಜಪ್ತಿ; ಇಬ್ಬರು ಆರೋಪಿಗಳು ಪೊಲೀಸ್ ವಶಕ್ಕೆ

ಸಿರುಗುಪ್ಪ ,ಮೇ.31-

ತಾಲ್ಲೂಕಿನಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದವರ ವಿರುದ್ಧ ಆಹಾರ ಇಲಾಖೆ ಹಾಗೂ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಅಂದಾಜು 145 ಕ್ವಿಂಟಲ್ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡಿದ್ದಾರೆ.

ಬಂಡ್ರಳ್ ಗ್ರಾಮದಿಂದ ಹೊಳಗುಂದಿ ಕಡೆಗೆ ಓಮ್ನಿ ವಾಹನದಲ್ಲಿ ಅಕ್ರಮವಾಗಿ ಅಕ್ಕಿ ಸಾಗಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಬುಧವಾರ ಆಹಾರ ಶಿರಸ್ತೇದಾರ ಹನುಮೇಶ್ ನೇತೃತ್ವದಲ್ಲಿ ಸಿರುಗುಪ್ಪ ಪೊಲೀಸ್ ಠಾಣೆ ಸಿಬ್ಬಂದಿ ದಾಳಿ ನಡೆಸಿದ್ದಾರೆ.

ಓಮ್ನಿಯಲ್ಲಿ ಸಾಗಾಟ ಮಾಡುತ್ತಿದ್ದ 40 ರಿಂದ 45 ಕೆಜಿ ತೂಕದ ಅಕ್ಕಿ ಚೀಲಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. 322 ಚೀಲ ಪಡಿತರ ಅಕ್ಕಿಯನ್ನು ಗೋಡೌನ್‌ನಲ್ಲಿ ಅಕ್ರಮವಾಗಿ ಸಂಗ್ರಹಿಸಿ ಸಾಗಿಸಲಾಗುತ್ತಿತ್ತು. ವಶಪಡಿಸಿಕೊಂಡ ಅಕ್ಕಿಯ ಅಂದಾಜು ಮೌಲ್ಯ 4,93,000 ಎಂದು ತಿಳಿದು ಬಂದಿದೆ. ಈ ವೇಳೆ ಇಬ್ಬರನ್ನು ವಶಕ್ಕೆ ಪಡೆದು, ಅವರ ವಿರುದ್ಧ ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಅಧಿಕಾರಿಗಳು ಸಮನ್ವಯದೊಂದಿಗೆ ಜನರಿಗೆ ಉತ್ತಮ ಆಡಳಿತ ನೀಡಿ



ಯಾದಗಿರಿ,ಮೇ.31-

ಪ್ರತಿಯೊಬ್ಬರೂ ಗೌರವಯುತ ಜೀವನ ಹಾಗೂ ಆರೋಗ್ಯಕರ ರೀತಿಯಲ್ಲಿ ಬದುಕಲು ಸಂವಿಧಾ ನದಲ್ಲಿ ಅನುಕೂಲ ಮಾಡಿಕೊಳ್ಳಲಾಗಿದ್ದು, ಜಿಲ್ಲೆಯ ಅಧಿಕಾರಿಗಳು ಸಮನ್ವಯದೊಂದಿಗೆ ಕೆಲಸ ಮಾಡುವ ಮೂಲಕ ಜನರಿಗೆ ಉತ್ತಮ ಆಡಳಿತ ನೀಡಬೇಕೆಂದು ಕರ್ನಾ ಟಕದ ಉಪ ಲೋಕಾಯುಕ್ತ ರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಹೇಳಿದರು.

ಶುಕ್ರವಾರ ದಂದು ಯಾದಗಿರಿ ಜಿಲ್ಲಾಡಳಿತ ಭವನದ ಆಡಿಟೋರಿ ಯಂ ಹಾಲನಲ್ಲಿ ಸಾರ್ವಜನಿಕ ದೂರ ವಿಚಾರಣೆ ಹಾಗೂ ಪ್ರಕರಣ ಗಳ ವಿಲೇವಾರಿ ಸಭೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾ ರವು ಅನೇಕ ಯೋಜನೆಗಳು, ಕಾರ್ಯ ಕ್ರಮಗಳನ್ನು ಜಾರಿಗೆ ತಂದಿವೆ. ಅವುಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸಲು ಆಡಳಿತ ವರ್ಗವು ಪ್ರಮುಖ ಪಾತ್ರ ವಹಿಸುತ್ತದೆ. ಹಾಗಾಗಿ ಜಿಲ್ಲೆಯ ಸಮಸ್ತ ಅಧಿಕಾರಿಗಳು ಸಮನ್ವ ಯ ದೊಂದಿಗೆ ಕಾರ್ಯನಿರ್ವಹಿಸಬೇಕು. ಸರ್ಕಾರಿ ಕೆಲಸ ಕೇವಲ ಸಂಬಂಳಕ್ಕೆ ಕೆಲಸ ಮಾಡದೆ. ಇದು ನಮ್ಮ ಊರು ಎಂಬ ಮನೋಭಾ ವದಿಂದ ಕೆಲಸ ಮಾಡಿದಲ್ಲಿ ಗ್ರಾಮ, ಪಟ್ಟಣ ಹಾಗೂ ನಗರವು ಅಭಿವೃದ್ಧಿಯಾಗಲು ಸಹಾಯಕವಾಗುತ್ತದೆ ಎಂದರು.

ಕಾನೂನು ಪ್ರಕಾರ ಎಲ್ಲರೂ ಕೆಲಸ ಮಾಡಬೇಕು. ಯಾವುದೇ ಜಾತಿಯ ವ್ಯಾಮೋಹ ಬಿಡಬೇಕು. ಹೆಣ್ಣು ಮಕ್ಕಳನ್ನು ಗೌರವಯುತ ವಾಗಿ ನಡೆಸಿಕೊಳ್ಳಬೇಕು. ಹಿರಿಯ ರಿಗೆ ಸರಿಯಾಗಿ ಮಾಸಾಶನವನ್ನು ಸಮಯಕ್ಕೆ ಸರಿಯಾಗಿ ನೀಡಬೇಕು. ಭಾರತ ಸಂವಿಧಾನಕ್ಕೆ ನಾವು ಎಲ್ಲರೂ ಭದ್ದತ್ಯ ತೋರಿಸಬೇಕು. ಅಧಿಕಾರ ವನ್ನು ದುರ್ಬಳಕೆ ಮಾಡಿಕೊಳ್ಳಬಾ ರದು. ರೈತರಿಗೆ ಸಮಯಕ್ಕೆ ಸರಿ ಯಾಗಿ ಬಿತ್ತನೆ ಬೀಜ, ರಸಗೊಬ್ಬರ ಗಳನ್ನು ವಿತರಣೆ ಮಾಡಬೇಕು. ಕಂದಾಯ ಇಲಾಖೆಯಲ್ಲಿ ರೈತರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದಲ್ಲಿ ಮಾಡಬೇಕು ಎಂದರು.

ಮಾಡಬೇಕಾದ ಕೆಲಸವನ್ನು ಸಮಯಕ್ಕೆ ಸರಿಯಾಗಿ ಮಾಡಬೇಕು. ಯಾವುದೇ ಒತ್ತಡಕ್ಕೆ ಒಳಗಾಗದೆ ಸ್ವತಂತ್ರವಾಗಿ ಕೆಲಸ ಮಾಡಬೇಕು. ದೇಶದಲ್ಲಿ ಕರ್ನಾಟಕ ರಾಜ್ಯವು ಭ್ರಷ್ಟಾಚಾರದಲ್ಲಿ ಐದನೆಯ ಸ್ಥಾನದ ಲ್ಲಿದೆ. ನಮ್ಮ ನಡತೆಯನ್ನು ಕಾಪಾ ಡುವ ಮೂಲಕ ನಾವು ಉತ್ತಮ ಜೀವನ ನಡೆಸಬೇಕು. ಭ್ರಷ್ಟಾಚಾರ ನಿರ್ಮೂಲನೆ ಮಾಡಿದಲ್ಲಿ ದೇಶ, ರಾಜ್ಯ ಸಾಕಷ್ಟು ಅಭಿವೃದ್ಧಿಯಾ ಗುತ್ತದೆ ಹಾಗೂ ಸಂವಿಧಾನದ ಆಶೋತ್ತರಗಳನ್ನು ನಾವೆಲ್ಲರೂ ಪಾಲಿಸಬೇಕು ಎಂದರು.

ಲೋಕಾಯುಕ್ತರ ಕಚೇರಿಗೆ ಬಡವರು, ದೀನ ದಲಿತರು, ಸಿದ್ಧಾಂ ತಗಳನ್ನು ಪಾಲಿಸುವವರ ಪ್ರಕರಣ ಗಳು ಬರುತ್ತವೆ. ಉದ್ದೇಶ ಪೂರ್ವ ಕವಾಗಿ ಸರ್ಕಾರಿ ಅಧಿಕಾರಿಗಳ ಮೇಲೆ ಪ್ರಕರಣ ದಾಖಲು ಮಾಡಿ, ಹಣ ವಸೂಲಿ ಮಾಡುವ ಕೆಲವು ವ್ಯಕ್ತಿಗಳು ಇದ್ದಾರೆ. ಇಂತಹ ವ್ಯಕ್ತಿಗಳಿಂದ ಅಧಿಕಾರಿಗಳು ಎಚ್ಚರ ವಹಿಸಬೇಕು. ಲೋಕಾಯುಕ್ತ ಕಾಯ್ದೆಯನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಸಾರ್ವಜನಿಕರು, ಹಾಗೂ ಅಧಿಕಾರಿ ಗಳು ನಮ್ಮ ಇಲಾಖೆಯ ಬಗ್ಗೆ ಸರಿಯಾಗಿ ತಿಳಿದುಕೊಂಡಾಗ ತಮ್ಮನ್ನು ತಾವು ರಕ್ಷಣೆ ಮಾಡಿಕೊಳ್ಳ ಬಹುದಾಗಿದೆ ಎಂದರು.

ಕರ್ನಾಟಕ ಲೋಕಾಯುಕ್ತರ ವ್ಯಾಪ್ತಿಗೆ ಬರುವ ಪ್ರಕರಣಗಳನ್ನು ಮಾತ್ರ ವಿಚಾರಣೆ ಮಾಡಲಾಗುತ್ತದೆ. ಸಾರ್ವಜನಿಕರು ಶಾಂತ ಚಿಂತದಿಂದ ವರ್ತಿಸಬೇಕು. ಎಲ್ಲರೂ ಸಹ ಎರು ಧ್ವನಿಯಲ್ಲಿ ಮಾತನಾಡದೆ ಒಬ್ಬೊಬ್ಬರಾಗಿ ತಮ್ಮ ಪ್ರಕರಣಗಳ ಮಾಹಿ ತಿ ನೀಡಿ. ಜಿಲ್ಲಾಡಳಿತದಿಂದ ನಮಗೆ ಸಹಕಾರ ನೀಡಿದ್ದಾರೆ. ಜಿಲ್ಲಾಡಳಿತವು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾ ನುಭವಿಗಳಿಗೆ ಸೇವೆ ನೀಡುವ ಮೂ ಲಕ ಅವರಿಗೆ ನೆರವು ಆಗಬೇಕೆಂದರು.

ದೂರುಗಳು ಹೆಚ್ಚಿನ ರೀತಿಯಲ್ಲಿ ನಮಗೆ ಸಂದಾಯ ಆಗಿವೆ. ಸಮಸ್ಯೆ ಗಳಿಗೆ ಪರಿಹಾರವನ್ನು ಕಂಡುಕೊಂ ಡು ಪರಿಹಾರವನ್ನು ನೀಡುವುದಕ್ಕೆ ಪ್ರಯತ್ನ ಮಾಡಲಾಗುತ್ತದೆ. ಭಾರತ ಸಂವಿಧಾನದಲ್ಲಿ ಅನುಚ್ಛೇದ 21ರ ಪ್ರಕಾರ ಎಲ್ಲರಿಗೂ ಸಮಪಾಲು, ಎಲ್ಲರಿಗೂ ಸಮಬಾಳು ನೀಡಿದೆ. ಎಲ್ಲರೂ ಗೌರವಯುತವಾದ, ಆರೋಗ್ಯಕರ ರೀತಿಯಲ್ಲಿ ಮತ್ತು ನಮ್ಮ ಇಚ್ಛೆಯಂತೆ ಜೀವನವನ್ನು ನಡೆಸಲು ಅವಕಾಶ ನೀಡಿದೆ. 14ವರ್ಷದೊಗಿನ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯವಾಗಿ ಶಿಕ್ಷಣ ನೀಡುವದಾಗಿದೆ ಎಂದರು.

ಮೂರು ವರ್ಷಗಳ ಹಿಂದೆ ಯಾದಗಿರಿ ಜಿಲ್ಲೆಗೆ ಬಂದಾಗ ಮೂರು ದಿನಗಳ ಕಾರ್ಯಕ್ರಮ ಮಾಡಲಾಗಿತ್ತು. ಮೊದಲ ದಿನ ಸಾರ್ವಜನಿಕ ಅರ್ಜಿ ಸ್ವೀಕಾರ. ಎರಡನೆಯ ದಿನ ಅರ್ಜಿಗಳ ವಿಲೇ ವಾರಿ ಮತ್ತು ಮೂರನೆ ದಿನ ಸಮಸ್ಯೆ ಗಳಿಗೆ ಪರಿಹಾರ ನೀಡಲಾಗಿತ್ತು. ಈ ಸಲ ಎರಡು ದಿನಗಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈಗಾಗಲೇ ಒಂದು ತಿಂಗಳ ಮುಂಚೆ ಎಲ್ಲಾ ಕೇಸುಗಳ ಮಾಹಿತಿಯನ್ನು ತಮಗೆ ನೀಡಲಾಗಿದ್ದು ಸಮಸ್ಯೆಗಳಿಗೆ ಪರಿಹಾರ ಮಾಡಬೇಕೆಂದು ಹೇಳಿ ದರು. ಸಾರ್ವಜನಿಕರು ಹಾಗೂ ಸರಕಾರಿ ನೌಕರರನ್ನು ಒಬ್ಬೊಬ್ಬರ ನ್ನಾಗಿ ಸರತಿ ಸಾಲಿನಲ್ಲಿ ಕರೆಸಿ ದೂರು ದಾರು ಹಾಗೂ ಎದರುದಾರರ ಪ್ರಕರಣಗಳ ವಿಚಾರಣೆ ನಡೆಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ, ಆಪ್ತ ಕಾರ್ಯದರ್ಶಿ ಕಿರಣ ಪಿ.ಎಮ್. ಪಾಟೀಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್,ಾ ಲೋಕಾಯುಕ್ತ ಪೊಲೀಸ್ ಜಿಲ್ಲಾ ವರಿಷ್ಠಾಧಿಕಾರಿ ಸಿದ್ದರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ಗೋಹತ್ಯೆ ಶಂಕೆ : ಓರ್ವನ ಬಂಧನ

ಹುಲಸೂರ್ ,ಮೇ.31-

ಪಟ್ಟಣದಲ್ಲಿ ಗೋಹತ್ಯೆ ನಡೆಸಲಾಗಿದೆ ಎಂಬ ಶಂಕೆಯಲ್ಲಿ ಒಬ್ಬ ಆರೋಪಿಯನ್ನು ಬಂಧಿಸಿರುವ ಘಟನೆ ಗುರುವಾರ ನಡೆದಿದೆ.

ಗೋಹತ್ಯೆಗೆ ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಹಿನ್ನೆಲೆ ಆಕ್ರೋಶ ವ್ಯಕ್ತವಾಗಿತ್ತು. ಬಳಿಕ ಭಜರಂಗದಳದ ಕಾರ್ಯಕರ್ತರು ಠಾಣೆಗೆ ತೆರಳಿ ಪೊಲೀಸರಿಗೆ ದೂರು ಸಲ್ಲಿಸಿದ್ದರು.

ಪಿಎಸ್‌ಐ ಶಿವಪ್ಪ ಮೇಟಿ ನೇತೃತ್ವದ ಪೊಲೀಸ್ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಸ್ಥಳದಲ್ಲಿ ದೊರೆತ ಮಾಂಸದ ತುಂಡುಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದು, ಅದು ಯಾವ ಪ್ರಾಣಿಯದ್ದು ಎಂಬುದು ದೃಢಪಟ್ಟಿಲ್ಲ.

ಸ್ಥಳಕ್ಕೆ ಡಿವೈಎಸ್‌ಪಿ ಮಾಡೋಳಪ್ಪ ಹಾಗೂ ಸಿಪಿಐ ಅಲಿಸಾಬ್ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕನ ನಡೆಸಿದರು. ಪಶು ವೈದ್ಯಾಧಿಕಾರಿಗಳು ಮಾಂಸವನ್ನು ಪರಿಶೀಲನೆಗೆ ಕಳುಹಿಸಿದ್ದು, ವರದಿ ಬಂದ ಬಳಿಕ ಸ್ಪಷ್ಟ ಮಾಹಿತಿ ಲಭ್ಯವಾಗಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಗಫಾರ್ ಖುರೇಷಿ ಎಂಬಾತನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ಆರೋಪಿ ವಿರುದ್ಧ ಪಶು ರಕ್ಷಣಾ ಪ್ರತಿಬಂಧಕ ಕಾಯ್ದೆಯ ಕಲಂ 4 ಮತ್ತು 12 ಹಾಗೂ ಬಿಎನ್‌ಎಸ್ ಕಾಯ್ದೆಯ 325 ಮತ್ತು 271ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಡಿವೈಎಸ್‌ಪಿ ಮಾಡೋಳಪ್ಪ ಅವರು ತಿಳಿಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆ ಸಾರ್ವಜನಿಕರು ಸ್ಥಳದಲ್ಲಿ ಜಮಾಯಿಸಿದ್ದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಬಿಗಿ ಭದ್ರತೆ ಕೈಗೊಂಡು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತೆಗೆದುಕೊಂಡಿದೆ.

ಪಟ್ಟಣದಲ್ಲಿ ಶಾಂತಿ ಹಾಗೂ ಸೌಹಾರ್ದತೆ ಕಾಪಾಡಿಕೊಳ್ಳುವಂತೆ ಸಾರ್ವಜನಿಕರಲ್ಲಿ ಡಿವೈಎಸ್‌ಪಿ ಮಾಡೋಳಪ್ಪ ಅವರು ಮನವಿ ಮಾಡಿದ್ದಾರೆ.



ಪ್ರಿಯಾಂಕ್ ಖರ್ಗೆಗೆ ಡಿಸಿಎಂ, ರುದ್ರಪ್ಪ ಲಮಾಣಿಗೆ ಸಚಿವ ಸ್ಥಾನ ನೀಡುವಂತೆ ಬಂಜಾರ ಸಮಾಜ ಮನವಿ

ಚಿತ್ತಾಪುರ,ಮೇ.31-

ಪ್ರಿಯಾಂಕ್ ಖರ್ಗೆ ಅವರನ್ನು ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರಕಾರದಲ್ಲಿ ಮುಖ್ಯಮಂತ್ರಿಯನ್ನಾಗಿ ಮಾಡಬೇಕು ಹಾಗೂ ಬಂಜಾರ ಸಮಾಜದ ಶಾಸಕ ರುದ್ರಪ್ಪ ಲಮಾಣಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಬಂಜಾರ ಸಮಾಜದ ಹಿರಿಯ ಮುಖಂಡ ಚಂದು ಜಾಧವ್ ಮತ್ತು ಯುವ ಅಧ್ಯಕ್ಷ ಜಗದೀಶ್ ಚವ್ಹಾಣ ಅವರು ಕಾಂಗ್ರೆಸ್ ಹೈ ಕಮಾಂಡ್'ಗೆ ಮನವಿ ಮಾಡಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ಅವರು ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳಡಿ ಮತ್ತು ಸಂವಿಧಾನದ ಆಶಯದಂತೆ ಮುನ್ನಡೆಯುತ್ತಿರುವ ಪ್ರಬುದ್ಧ ರಾಜಕಾರಣಿಯಾಗಿದ್ದು, ಬಿಜೆಪಿಗೆ ಟಕ್ಕರ್ ಕೊಡುವ ಏಕೈಕ ನಾಯಕ'ರಾಗಿದ್ದಾರೆ. ಹೀಗಾಗಿ ಇವರನ್ನು ಉಪ ಮುಖ್ಯಮಂತ್ರಿಯಾಗಿ ಮಾಡಬೇಕು ಎಂದು ಆಗ್ರಹಿಸಿದರು.

ಸದಾ ಅಭಿವೃದ್ಧಿ ಪರ ಚಿಂತನೆ ಇರುವ ವೈಚಾರಿಕ ಮತ್ತು ವೈಜ್ಞಾನಿಕ ಮನೋಭಾವ ಉಳ್ಳ ಪ್ರಿಯಾಂಕ್ ಖರ್ಗೆ ಅವರಿಗೆ ಡಿಸಿಎಂ ಮಾಡುವ ಮೂಲಕ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಇನ್ನೂ ಹೆಚ್ಚು ಕೆಲಸ ಮಾಡಲು ಅವಕಾಶ ನೀಡಬೇಕು ಎಂದರು.

ಬಂಜಾರ ಸಮಾಜ ಯಾವತ್ತೂ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುತ್ತಾ ಬಂದಿದೆ. ಮುಂದೆಯೂ ಬೆಂಬಲ ನೀಡಲಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಂಜಾರ ಸಮಾಜದ ಶೇ.80 ಪ್ರತಿಶತ ಮತಗಳು ಕಾಂಗ್ರೆಸ್ ಪಕ್ಷಕ್ಕೆ ಬಂದಿವೆ. ಆದರೂ ಸಮಾಜಕ್ಕೆ ಸಚಿವ ಸ್ಥಾನ ಸಿಕ್ಕಿರಲಿಲ್ಲ. ಆದ್ದರಿಂದ ಈ ಬಾರಿಯ ಹೊಸ ಸಚಿವ ಸಂಪುಟದಲ್ಲಿ ಬಂಜಾರ ಸಮಾಜದ ಏಕೈಕ ಶಾಸಕ ರುದ್ರಪ್ಪ ಲಮಾಣಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಬಂಜಾರ ಸಮಾಜದ ತಾಲೂಕು ಅಧ್ಯಕ್ಷ ಭೀಮಸಿಂಗ್ ಚವ್ಹಾಣ, ಮುಖಂಡರಾದ ದೇವಿದಾಸ್ ಚವ್ಹಾಣ, ವಿಜಯಕುಮಾರ್ ಚವ್ಹಾಣ ಯಾಗಾಪುರ, ಪ್ರವೀಣ್ ಪವಾರ, ರಾಕೇಶ್ ಪವಾರ, ಗೋಪಾಲ ರಾಠೋಡ ಉಪಸ್ಥಿತರಿದ್ದರು.

ಬೆಳ್ಳಂ ಬೆಳಗ್ಗೆ ಯಾದಗಿರಿಯ ಲುಂಬಿನಿ ವನಕ್ಕೆ ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ ಭೇಟಿ, ಪರಿಶೀಲನೆ



ಯಾದಗಿರಿ,ಮೇ.31-

ಶನಿವಾರ ಬೆಳ್ಳಂ ಬೆಳಗ್ಗೆ ಕರ್ನಾಟಕದ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಶ್ರೀ ಕೆ.ಎನ್.ಫಣೀಂದ್ರ ಅವರಿಂದು ಯಾದಗಿರಿ ನಗರದ ಲುಂಬಿನಿ ವನಕ್ಕೆ ಭೇಟಿ ನೀಡಿ, ಅಲ್ಲಿನ ಸ್ಥಿತಿಗತಿಗಳ ಪರಿಶೀಲನೆ ನಡೆಸಿದರು.

ಲುಂಬಿನಿ ವನದಲ್ಲಿ ಕುಡಿಯುವ ನೀರು ಶೌಚಾಲಯ ಹಾಗೂ ಸ್ವಚ್ಛತೆ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚಿಸಿ, ಗಾರ್ಡನ್ ಸ್ವಚ್ಛ ಹಾಗೂ ಸುಂದರವಾಗಿ ಕಾಣುವಂತೆ ಮಾಡಿ, ಸಾರ್ವಜನಿಕರಿಗೆ ಅನುಕೂಲ ಮಾಡಬೇಕು ಎಂದರು.

ನಂತರ ಗಾರ್ಡನ್ ನಲ್ಲಿ ಯೋಗಾಭ್ಯಾಸ ಮಾಡುತ್ತಿರುವ ಸಾರ್ವಜನಿಕರು ಗಾರ್ಡನ್‌ಗೆ ಹೊರಗಡೆಯಿಂದ ನೀರು ಬರುತ್ತಿದೆ. ಕೂಡಲೇ ಅದನ್ನು ಸರಿಪಡಿಸಬೇಕು. ಸ್ವಚ್ಛತೆಗಾಗಿ ಯಾವ ಅಧಿಕಾರಿಗಳು ಗಾರ್ಡನ್‌ಗೆ ಬರುವುದಿಲ್ಲ. ಎಂದು ಸಾರ್ವಜನಿಕರು ಉಪ ಲೋಕಾಯುಕ್ತರ ಗಮನಕ್ಕೆ ತಂದರು.

ಸ್ಥಳಕ್ಕೆ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು, ತಾಲೂಕು ಪಂಚಾಯತ್ ಅಧಿಕಾರಿಗಳು, ನಗರಸಭೆಯ ಅಧಿಕಾರಿಗಳು ಸ್ಥಳಕ್ಕೆ ಬರುವಂತೆ ಸಹಾಯಕ ಆಯುಕ್ತರಿಂದ ಕರೆ ಮಾಡಲಾಯಿತು. ನಂತರ ದೂರವಾಣಿ ಮೂಲಕ ಸಂಬಂಧಿಸಿದ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡ ಲೋಕಾಯುಕ್ತರು ಮುಂದಿನ ದಿನಗಳಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಣೆ ಮಾಡಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸ್ವಚ್ಛತೆ ಎಂದರೆ ಕೇವಲ ಕಸಗೂಡಿಸುವುದು ಅಲ್ಲ. ಎಲ್ಲ ಮೂಲಭೂತ ಸೌಕರ್ಯಗಳನ್ನು ಈ ಲುಂಬಿನಿ ವನದಲ್ಲಿ ಒದಗಿಸಬೇಕು. ಕುಡಿಯುವ ನೀರಿನ ಆರ್.ಓ ಪ್ಲಾಂಟ್ ಕೂಡಲೇ ರಿಪೇರಿ ಮಾಡಿ, ಸಾರ್ವಜನಿಕರಿಗೆ ಕುಡಿಯುವ ನೀರಿಗೆ ಅನುಕೂಲ ಮಾಡಬೇಕು. ಗಾರ್ಡನ್‌ನ ಸಂಜೀವಿನಿ ಕಲ್ಪವೃಕ್ಷ ಮಂದಿರವನ್ನು ಬೇಗನೆ ರಿಪೇರಿ ಮಾಡಿ, ಸಾರ್ವಜನಿಕರ ಬಳಕೆಗೆ ಒದಗಿಸಬೇಕು. ಪಕ್ಕದ ಕೆರೆಯ ನೀರನ್ನು ಗಾರ್ಡನ್ ಒಳಗಡೆ ಬರದಂತೆ ನೋಡಿಕೊಳ್ಳಬೇಕು. ಅಲ್ಲದೆ ಕೆರೆ ಒತ್ತವರಿಯನ್ನು ಕೂಡಲೇ ತೆರವುಗೊಳಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಉಪ ಲೋಕಾಯುಕ್ತರು ಸೂಚಿಸಿದರು.

ಈ ವೇಳೆ ಸಾರ್ವಜನಿಕರು ಮಾತನಾಡಿ, ಗಾರ್ಡನ್ ನಲ್ಲಿ ಬಹಳಷ್ಟು ಹಾವುಗಳು ಬರುತ್ತವೆ. ಅವುಗಳಿಗೆ ಕಡಿವಾಣ ಹಾಕಬೇಕೆಂದು ಉಪ ಲೋಕಾಯುಕ್ತರಲ್ಲಿ ಮನವಿ ಮಾಡಿದರು.

ಉಪ ಲೋಕಾಯುಕ್ತರು ಗಾರ್ಡನ್ ವಿಸ್ತೀರ್ಣದ ಮಾಹಿತಿ ಪಡೆದರು. ಅಲ್ಲದೆ ಹೆಚ್ಚಿನ ನೀರು ಯಾವಕಡೆಯಿಂದ ಬರುತ್ತದೆ ಮತ್ತು ಯಾವ ಕಡೆಗೆ ಹೋಗುತ್ತದೆ ಎಂದು ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆದರು. ಬೇರೆ ಜಿಲ್ಲೆಯಲ್ಲಿ ಇಲ್ಲದ ಸಮಸ್ಯೆ ಯಾದಗಿರಿ ಜಿಲ್ಲೆಯಲ್ಲಿ ಮಾತ್ರ ಏಕೆ. ಕೂಡಲೇ ಎಲ್ಲಾ ಸಮಸ್ಯೆಗಳಿಗೆ ಕಡಿವಾಣ ಹಾಕಬೇಕು. ಇಲ್ಲದಿದ್ದಲ್ಲಿ ಸರ್ಕಾರಕ್ಕೆ ಪತ್ರ ಬರೆಯುವುದಾಗಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಗಾರ್ಡನ್ ಒಳಗಡೆ ಚೆನ್ನಾಗಿ ಇಟ್ಟಕೊಳ್ಳಬೇಕು. ಕೆರೆ ಚೆನ್ನಾಗಿದೆ. ಸ್ವಚ್ಛವಾಗಿ ಇಟ್ಟಕೊಳ್ಳಬೇಕು. ಬಾಕಿ ಇರುವ ಇದರ ಎಲ್ಲಾ ಕಾಮಗಾರಿಗಳನ್ನು ಕೂಡಲೇ ಪ್ರಾರಂಭಿಸಬೇಕು. ನಿಗದಿ ಸಮಯದಲ್ಲಿ ಮುಗಿಸಿ, ಸಾರ್ವಜನಿಕರ ಉಪಯೋಗಕ್ಕೆ ಒದಗಿಸಬೇಕು. ಕಾಲಕಾಲಕ್ಕೆ ಶೌಚಾಲಯಗಳನ್ನು ಸ್ವಚ್ಛಗೊಳಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಲೋಕಾಯುಕ್ತ ಪೊಲೀಸ್ ಜಿಲ್ಲಾ ವರಿಷ್ಠಾಧಿಕಾರಿ ಸಿದ್ದರಾಜು, ಸಹಾಯಕ ಆಯುಕ್ತ ಶ್ರೀಧರ ಗೋಟೂರ, ಯಾದಗಿರಿ ನಗರ ಸಭೆಯ ಪೌರಾಯುಕ್ತ ಉಮೇಶ್ ಚಾವ್ಹಾಣ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ರಾಮಚಂದ್ರಪ್ಪ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR